₹ 4 | ಪುಟ: 4 | ಸಂಪುಟ: 4 | ಸಂಚಿಕೆ 93 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 | Issue: 93 | Friday, 26, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಸಂಸತ್ ಭವನದ ಉದ್ಘಾಟನೆ

### ವಿರೋಧ ಪಕ್ಷಗಳಿಗೆ ಚಾಟಿ ಬೀಸಿದ ಮೋದಿ



ನವದೆಹಲಿ: ನೂತನ ಸಂಸತ್ ಭವನದ ಉದ್ಘಾಟನಾ ಸಮಾರಂಭವನ್ನು ಬಹಿಷ್ಕ-ರಿಸಿದ ವಿರೋಧ ಪಕ್ಷಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಟಿ ಬೀಸಿದ್ದಾರೆ.

ಮೂರು ದೇಶಗಳ ಪ್ರವಾಸ ಮುಗಿಸಿ ದೆಹಲಿಯ ಪಾಲಂ ವಿಮಾನ ನಿಲ್ದಾಣ-ಕ್ಕೆ ಬಂದಿಳಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಬಿಜೆಪಿ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸ್ವಾಗತಿಸಿದರು. ಈ ವೇಳೆ ಅವರನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಅವರು ಮಾತನಾಡಿದರು.

ಸಿಡ್ನಿಯಲ್ಲಿ ನಡೆದ ಭಾರತೀಯ ಸಮುದಾಯದ ಕಾರ್ಯಕ್ರಮದಲ್ಲಿ ಆಸ್ಟ್ರೇಲಿಯಾದ ಹಾಲಿ ಪ್ರಧಾನಿ ಆ್ಯಂಟೋನಿ ಅಲ್ಬೆನೀಸ್ ಮಾತ್ರವಲ್ಲದೆ, ಮಾಜಿ ಪ್ರಧಾನಿ, ಆಡಳಿತ ಹಾಗೂ ವಿರೋಧ ಪಕ್ಷಗಳ ಸಂಸದರು ಭಾಗವಹಿಸಿದ್ದರು. ಇದು ಪ್ರಜಾಪ್ರಭುತ್ವದ ಶಕ್ತಿ. ಅವರೆಲ್ಲರೂ ಒಟ್ಟಾಗಿ ಭಾರತೀಯ ಸಮುದಾಯ ಕಾರ್ಯಕ್ರಮದಲ್ಲಿ ಭಾಗಿಯಾದರು' ಎಂದು ಹೇಳಿದರು.

ಆ ಮೂಲಕ ನೂತನ ಸಂಸತ್ ಭವನ ಉದ್ಘಾಟನಾ ಕಾರ್ಯಕ್ರಮವನ್ನು ಬಹಿಷ್ಕರಿಸಿದ ಪ್ರತಿಪಕ್ಷಗಳ ವಿರುದ್ಧ ಪರೋಕ್ಷ ಚಾಟಿ ಬೀಸಿದರು.

ನಾನು ಭೇಟಿಯಾದ ಎಲ್ಲಾ ನಾಯಕರು ಮತ್ತು ನಾನು ಮಾತನಾಡಿದ ಎಲ್ಲಾ ವ್ಯಕ್ತಿಗಳು ಭಾರತವು ಉ20 ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದಕ್ಕೆ ಶ್ಲಾಘಿಸಿದ್ದಾರೆ. ಇದು ಭಾರತೀಯರೆಲ್ಲರಿಗೂ ಹೆಮ್ಮೆಯ ವಿಚಾರ ಎಂದು ಅವರು ಹೇಳಿದರು.

## ಸಂಸತ್ ಭವನ ಉದ್ಘಾಟನೆಗೆ ಹೋಗುತ್ತೇನೆ: ಹೆಚ್.ಡಿ.ದೇವೇಗೌಡರು

### ಹೋಗದೆ ಇರುವುದಕ್ಕೆ ಅದೇನು ಬಿಜೆಪಿ, ಆರ್‌ಎಸ್‌ಎಸ್ ಕಚೇರಿಯೇ ಎಂದು ಪ್ರಶ್ನಿಸಿದ ಮಾಜಿ ಪ್ರಧಾನಿಗಳು



ಬೆಂಗಳೂರು: ಸಂಸತ್ ಭವನದ ನೂತನ ಕಟ್ಟಡ ಉದ್ಘಾಟನೆ ಕಾರ್ಯಕ್ರಮಕ್ಕೆ ನಾನು ಹಾಜರಾಗುತ್ತಿದ್ದೇನೆ. ಅದು ದೇಶದ ಆಸ್ತಿ. ಯಾರೊಬ್ಬರ ವೈಯಕ್ತಿಕ ವಿಷಯಕ್ಕೆ ಸಂಬಂಧಿಸಿದ್ದು ಅದಲ್ಲ ಎಂದು ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡ ಅವರು ಹೇಳಿದರು.

ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಪಕ್ಷದ ಆತ್ಮಾವಲೋಕನ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಮಾಜಿ ಪ್ರಧಾನಮಂತ್ರಿಗಳು; ಅದು ಯಾರ ವೈಯಕ್ತಿಕ ಕಾರ್ಯಕ್ರಮ ಅಲ್ಲ, ದೇಶದ ಕಾರ್ಯಕ್ರಮ ಎಂದರು.

ಆ ಭವ್ಯ ಕಟ್ಟಡ ದೇಶದ ಜನರ ತೆರಿಗೆ ಹಣದಿಂದ ನಿರ್ಮಾಣವಾಗಿದೆ. ಅದು ದೇಶಕ್ಕೆ ಸೇರಿದ್ದು. ಅದು ಬಿಜೆಪಿ ಅಥ-'ವಾ ಆರೆಸ್ಸೆಸ್ ಕಚೇರಿ ಅಲ್ಲ. ಸಂಸತ್ ಭವನದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಓರ್ವ ಮಾಜಿ ಪ್ರಧಾನಮಂತ್ರಿಯಾಗಿ, ದೇಶದ ಪ್ರಜೆಯಾಗಿ ಭಾಗಿಯಾಗುತ್ತಿದ್ದೇನೆ ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

ಬಿಜೆಪಿಯನ್ನು ರಾಜಕೀಯವಾಗಿ ವಿರೋಧ ಮಾಡಲಿಕ್ಕೆ ನನ್ನಲ್ಲಿ ಅನೇಕ ಕಾರಣಗಳಿವೆ. ಆದ-'ರೆ, ಸಂಸತ್ ಭವನ ಉದ್ಘಾಟನೆ ವಿಷಯದಲ್ಲಿ ರಾಜಕೀಯ ತರುವುದು ನನಗೆ ಇಷ್ಟವಿಲ್ಲ. ನಾನು ಸಂಸತ್ತಿನ ಎರಡು ಸದನಗಳಿಗೆ ಆಯ್ಕೆಯಾಗಿದ್ದೇನೆ. ಅಲ್ಲಿ ಸಾಂವಿಧಾನಿಕ ಚೌಕಟ್ಟಿನಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ, ಈಗಲೂ ಸದಸ್ಯನಾಗಿದ್ದೇನೆ. ಸಂವಿಧಾನದ ಮೌಲ್ಯಗಳನ್ನು ಕಾಪಾಡುವ ಕೆಲಸ ಮಾಡಿದ್ದೇನೆ. ಹೀಗಾಗಿ ಸಂವಿಧಾನದ ವಿಷಯದಲ್ಲಿ ನಾನು ರಾಜ-ಕೀಯ ತರಲಾರೆ ಎಂದು ಮಾಜಿ ಪ್ರಧಾನಿಗಳು ಸ್ಪಷ್ಟಪಡಿಸಿದರು.

ಅನೇಕ ಪಕ್ಷಗಳು ಸಂಸತ್ ಭವನದ ಉದ್ಘಾಟನೆ ಕಾರ್ಯಕ್ರಮವನ್ನು ಬಹಿಷ್ಕರಿಸಿವೆ. ಓರ್ವ ಮಾಜಿ ಪ್ರಧಾನಿಯಾಗಿ ನೀವು ಹೋಗುತ್ತೀರಾ? ಇಲ್ಲವಾ? ಎಂದು ಅನೇಕರು ಪ್ರಶ್ನೆ ಮಾಡಿದ್ದಾರೆ. ಹೌದು, ನಾನು ಸಂವಿಧಾನಕ್ಕೆ ಬದ್ಧನಾಗಿದ್ದೇನೆ. ಅದಕ್ಕಾಗಿ ಸಂಸತ್ ಭವನ ಉದ್ಘಾಟನೆಗೆ ಹೋಗುತ್ತೇನೆ ಎಂದು ಅವರಿಗೆ ಹೇಳಲು ಬಯಸುತ್ತೇನೆ ಎಂದು ಅವರು ನುಡಿದರು.

**ಪಕ್ಷವನ್ನು ಉಳಿಸುತ್ತೇನೆ:**

ಪಕ್ಷಕ್ಕಾಗಿ ನನ್ನ ಜೀವ ಸವೆಸಿದ್ದೇನೆ. ನಾನು ಬದುಕಿರುವಷ್ಟು ಕಾಲವೂ ಪಕ್ಷಕ್ಕಾಗಿಯೇ ಬದುಕುತ್ತೇನೆ. ನನ್ನ ಕೊನೆ ಉಸಿರು ಇರುವ ತನಕ ನಾನು ಪಕ್ಷಕ್ಕೇ ಮೀಸಲು ಎಂದು ಹೆಚ್.ಡಿ.ದೇವೇಗೌಡ ಅವರು ಭಾವುಕರಾಗಿ ನುಡಿದರು.


ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪಕ್ಷ ಸೋತಿ-ದೆ ಎಂಬುದಕ್ಕೆ ನನಗೆ ಬಹಳ ನೋವಿದೆ. ಅದೇ ನೋವಿನಿಂದ ಕಾಲ ದೂಡಲು ಸಾಧ್ಯವೇ? ಪುಟಿದೆದ್ದು ಪಕ್ಷ ಕಟ್ಟಬೇಕು, ಅಧಿಕಾರಕ್ಕೆ ಬರಲು ಶ್ರಮಿಸಬೇಕು ಎಂದರು ಅವರು.

ಸೋತಿದ್ದಕ್ಕೆ ಪ್ರಾಮಾಣಿಕವಾಗಿ ಕಾರಣಗಳನ್ನು ಹುಡುಕೋಣ. ಅವುಗಳಿಗೆ ಪರಿಹಾರಗಳನ್ನು ಕಂಡು ಹಿಡಿಯೋಣ. 1989ರಲ್ಲಿ ನಮ್ಮ ಪಕ್ಷ ಕೇವಲ ಎರಡು ಕ್ಷೇತ್ರಗಳಲ್ಲಿ ಮಾತ್ರ ಗೆದ್ದಿತ್ತು. ಅದಾದ ಮೇಲೆ ಐದು ವರ್ಷಗಳ ನಂತರ ನಮ್ಮ ಪಕ್ಷ ಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬಂತು. ನಾನೇ ಮುಖ್ಯಮಂತ್ರಿ ಆದೆ. ಆಮೇಲೆ ಪ್ರಧಾನಿಯೂ ಆದೆ. ಜನರ ಆಶೀರ್ವಾದದಿಂದ ಅದು ಸಾಧ್ಯವಾಯಿತು ಎಂದರು ಮಾಜಿ ಪ್ರಧಾನಿಗಳು.

ಸೋತಾಗ ನಿರಾಶೆ, ನೋವು ಸಹಜ. ನಾನು ಈ ಎಲ್ಲಾ ಹಂತಗಳನ್ನು ದಾಟಿಕೊಂಡು ಮುಂದೆ ಬಂದಿದ್ದೇನೆ. ಪಕ್ಷವನ್ನು ಕಟ್ಟಿ ಬೆಳೆಸಿದ್ದೇನೆ. ಈ ಪಕ್ಷವನ್ನು ಉಳಿಸುವ ಕೆಲಸ ನಾನು ಮಾಡಿಯೇ ಮಾಡುತ್ತೇನೆ ಎಂದು ಅವರು ಹೇಳಿದರು.

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಪಕ್ಷದ ರಾಜ್ಯಾಧ್ಯಕ್ಷ ಸಿ.ಎಂ.ಇಬ್ರಾಹಿಂ ಸೇರಿದಂತೆ ಪಕ್ಷದ ಎಲ್ಲಾ ಶಾಸಕರು, ವಿಧಾನ ಪರಿಷತ್ ಸದಸ್ಯರು, ಪಕ್ಷದ ತಾಲೂಕು, ಜಿಲ್ಲಾ ಘಟಕಗಳ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದರು.

## ಲೋಕಸಭಾ ಚುನಾವಣೆ: ಕೈ ಜವಾಬ್ದಾರಿ ಹಂಚಿಕೆ ಪಟ್ಟಿ ಸಿದ್ಧ



ಈ ಪಟ್ಟಿ ಸಹಿತ ದೆಹಲಿಗೆ ತೆರಳಿರುವ ಅವರು, ಸಂಪುಟ ವಿಸ್ತರಣೆಯ ಜೊತೆಗೆ ಈ ಬಗ್ಗೆಯೂ ಎಐಸಿಸಿ ನಾಯಕರ ಜೊತೆ ಚರ್ಚೆ ನಡೆಸಲಿದ್ದಾರೆ ಎಂದು ಶಿವಕುಮಾರ್ ಅವರ ಆಪ್ತ ಮೂಲಗಳು ತಿಳಿಸಿವೆ.

ಪಟ್ಟಿಯಲ್ಲಿ ಯಾ-ರಿದ್ದಾರೆ?: ತುಮಕೂರು-ಜಿ. ಪರಮೇಶ್ವರ, ಚಿತ್ರದುರ್ಗ- ಟಿ.ಬಿ. ಜಯಚಂದ್ರ, ಶಿವಮೊಗ್ಗ-ಮಧು ಬಂಗಾರಪ್ಪ ಮತ್ತು ಬೇಳೂರು ಗೋಪಾಲಕೃಷ್ಣ, ಉಡುಪಿ -ಬಿ.ಕೆ. ಹರಿಪ್ರಸಾದ್, ದಕ್ಷಿಣ, ಮಿಥ-'ನ್ ರೈ ಮತ್ತು ಅಶೋಕ್ ರೈ, ಬೆಳಗಾವಿ -ಸತೀಶ್ ಜಾರಕಿಹೊಳಿ ಮತ್ತು ಲಕ್ಷ್ಮೀ ಹೆಬ್ಬಾಳ್ಕರ್, ಜಗದೀಶ ಶೆಟ್ಟರ್ ಮತ್ತು ವಿನಯ್ ಕುಲಕರ್ಣಿ, ಕೋಲಾರ -ರಾಮಲಿಂಗಾರೆಡ್ಡಿ ಮತ್ತು ಮಂಜುನಾಥ್, ಬೆಂಗಳೂರು ಗ್ರಾಮಾಂತರ - ಡಿ.ಕೆ. ಸುರೇಶ್, ಉತ್ತರ ಕನ್ನಡ - ಆರ್.ವಿ. ದೇಶಪಾಂಡೆ, ಮೈಸೂರು -ಎಚ್.ಸಿ. ಮಹಾದೇವಪ್ಪ, ಯತೀಂದ್ರ ಸಿದ್ದರಾಮಯ್ಯ, -ಪೊನ್ನಣ್ಣ, ಬಳ್ಳಾರಿ - ವಿ.ಎಸ್. ಉಗ್ರಪ್ಪ ಮತ್ತು ನಾಗೇಂದ್ರ, ಹಾಸನ -ಶಿವಲಿಂಗೇಗೌಡ.

ಸಚಿವರಾದ ರಾಮಲಿಂಗಾರೆಡ್ಡಿ ಮತ್ತು ಪ್ರಿಯಾಂಕ್ ಖರ್ಗೆ ಜೊತೆ ಚರ್ಚಿಸಿ ಶಿವಕುಮಾರ್ ಈ ಪಟ್ಟಿ ಸಿದ್ಧಪಡಿಸಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಸಚಿವ ರಾಮಲಿಂಗಾರೆಡ್ಡಿ ನೇತೃತ್ವದಲ್ಲಿ ತಂಡ ರಚಿಸಿದ್ದಾರೆ ಎಂದೂ ಮೂಲಗಳು ಹೇಳಿವೆ.

## ನಾಲ್ಕೈದು ತಿಂಗಳಲ್ಲಿ ರಾಜ್ಯ ರಾಜಕೀಯ ಚಿತ್ರಣ ಬದಲು: ಭವಿಷ್ಯ ನುಡಿದ ಮಾಜಿ ಸಿಎಂ



ಹಾವೇರಿ: ನಾಲ್ಕೈದು ತಿಂಗಳಲ್ಲಿ ರಾಜ್ಯ ರಾಜ-ಕೀಯದ ಚಿತ್ರಣವೇ ಬದಲಾಗಲಿದೆ ಎಂದು ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ ಭವಿಷ್ಯ ನುಡಿದಿದ್ದಾರೆ.

ಹಾವೇರಿಯಲ್ಲಿ ಮಾತನಾಡಿದ ಬಸಾರಾಜ್ ಬೊಮ್ಮಾಯಿ, ಕಾಂಗ್ರೆಸ್ ಸರ್ಕಾರ ಹೋಗುವಂತಹ ದಾರಿ ನೋಡಿದರೆ ಇದು ಬಹಳ ದಿನ ನಡೆಯುವುದಿಲ್ಲ. ನಾಲ್ಕೈದು ತಿಂಗಳಲ್ಲಿ ರಾಜ್ಯ ರಾಜ-ಕೀಯದ ಚಿತ್ರಣ ಬದಲಾಗಲಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ. ನಾವು ಜಾರಿಗೆ ತಂದಿರುವ ಜನಪರ ಕಾನೂನು ರದ್ದುಪಡಿಸಲು ಹೊರಟಿದ್ದಾರೆ. ಬಿಜೆಪಿ ನಾಯಕರು, ಕಾರ್ಯಕರ್ತರ ಮೇಲೆ ಕೇಸ್ ಹಾಕುತ್ತಿದ್ದಾರೆ. ಕಾಂಗ್ರೆಸ್ ನವರಿಗೆ ನಮ್ಮ ಕಾರ್ಯಕರ್ತರು ತಲೆಬಾಗುವ ಪ್ರಶ್ನೆಯೇ ಇಲ್ಲ ಎಂದರು.'

ಎಲ್ಲೋ ಅಲ್ಪಸ್ವಲ್ಪ ವ್ಯತ್ಯಾಸವಾಗಿದ್ದಕ್ಕೆ ನಾವು ಸೋತಿರಬಹುದು. ಆದರೆ ಸ್ವಾಭಿಮಾನ ಕಳೆದುಕೊಂಡಿಲ್ಲ. ಮೋದಿಯವರ ನೇತೃತ್ವದಲ್ಲಿ ಲೋಕಸಭಾ ಚುನಾವಣೆ ಎದುರಿಸುತ್ತೇವೆ ಎಂದು ಹೇಳಿದ್ದಾರೆ.

ಇನ್ನು ಎಲ್ಲೆಲ್ಲಿ ರಾಜಕಾರಣ ನಡೆಯುತ್ತದೆ. ಎಲ್ಲಿ ಏನ್ ನಡೆಯುತ್ತದೆ ಗೊತ್ತಿದೆ. ಯಾವ ವ್ಯಕ್ತಿಯನ್ನು ಎಲ್ಲಿ ಕಟ್ಟಿಹಾಕಬೇಕು ಎಂಬುದು ಚೆನ್ನಾಗಿ ಗೊತ್ತಿದೆ. ನನ್ನ ಜನರ ಕ್ಷೇಮ, ಶಿಗ್ಗಾಂವಿ ಕ್ಷೇತ್ರದ ಅಭಿವೃದ್ಧಿ ನನಗೆ ಮುಖ್ಯ. ಸರ್ಕಾರ ನಮ್ಮದು ಎಂದು ಅಭಿವೃದ್ಧಿಗೆ ಅಡ್ಡಿ ಪಡಿಸಿದ್ರೆ ಸುಮ್ಮನಿರಲ್ಲ ಎಂದು ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಯಾಸಿನ್ ಖಾನ್ ಪಠಾಣ್ ಗೆ ಪರೋಕ್ಷ ವಾರ್ನಿಂಗ್ ನೀಡಿದ್ದಾರೆ.

## ಗಂಗಾ ಕಲ್ಯಾಣ ಯೋಜನೆಯಲ್ಲಿ ಅಕ್ರಮ: ದೂರು ದಾಖಲು




ಬೆಂಗಳೂರು: ಗಂಗಾ ಕಲ್ಯಾಣ ಯೋಜನೆಯ ಟೆಂಡರ್ ಪ್ರಕ್ರಿಯೆಯಲ್ಲಿ ಅವ್ಯವಹಾರ ಹಾಗೂ ಹಣ ದುರುಪಯೋಗವಾಗಿದೆ ಎಂದು ಆರೋಪಿಸಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ವಿಧಾನಸೌಧ ಪೊಲೀಸರಿಗೆ ದೂರು ನೀಡಿದ್ದಾರೆ.

ನಕಲಿ ದಾಖಲೆಗಳನ್ನು ನೀಡಿ ಯೋಜನೆಯಡಿ ಟೆಂಡರ್ ನೀಡಲಾಗಿದೆ ಎಂದು ಪಾಲಿಕೆ ಎಂಡಿ ಪಿ.ನಾಗೇಶ್ ದೂರಿನಲ್ಲಿ ಆರೋಪಿಸಿದ್ದಾರೆ. 2019-20 ಮತ್ತು 2020-21ನೇ ಸಾಲಿನಲ್ಲಿ ಟೆಂಡರ್ ಹಂಚಿಕೆ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿದ್ದು, ಯೋಜನೆಗೆ ಮೀಸಲಿಟ್ಟ ಹಣದಲ್ಲಿಯೂ ಅಕ್ರಮಗಳು ನಡೆದಿದೆ.

ಇದರಲ್ಲಿ ಪಾಲಿಕೆಯ ಅಂದಿನ ಎಂಡಿ ಕೆ.ಎಂ.ಸುರೇಶ್, ಅಂದಿನ ಮುಖ್ಯ ಪ್ರಧಾನ ವ್ಯವಸ್ಥಾಪಕ ಪ್ರಕಾಶ ಎಂ.ಹರಗಾಪುರೆ ಮತ್ತಿತರರು ಶಾಮೀಲಾಗಿದ್ದಾರೆ ಎಂದು ಆರೋಪಿಸಿದ್ದಾರೆ. ದೂರಿನ ಆದ-'ರದ ಮೇಲೆ ಪೊಲೀಸರು ಆರೋಪಿಗಳ ವಿರುದ್ಧ ವಂಚನೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪ್ರಕರಣ ಸಂಬಂಧ ಸಂಬಂಧಪಟ್ಟವರಿಗೆ ನೋಟಿಸ್ ಜಾರಿ ಮಾಡಿ ವಿಚಾರಣೆಗೆ ಕರೆಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

## ಆರ್.ಎಸ್.ಎಸ್.ಸಂಘಟನೆ ಬ್ಯಾನ್ ಮಾಡಲು ಹಿಂದೇಟು ಹಾಕಲ್ಲ; ನೂತನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆ



ನವದೆಹಲಿ: ಕೋಮು ವಿಷಬೀಜ ಬಿತ್ತಿ ರಾಜಕೀಯ ಬೇಳೆ ಬೇಸಿಕೊಳ್ಳುವರ ವಿರುದ್ಧ ಹಾಗೂ ಕಾನೂನು ಬಾಹಿರ ಚಟುವಟಿಕೆ ನಡೆಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ನೂತನ ಸಚಿವ ಪ್ರಿಯಾಂಕ್ ಖರ್ಗೆ ಎಚ್ಚರಿಕೆ ನೀಡಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ರಾಜ್ಯದ ನೆಮ್ಮದಿ ಕೆಡಿಸುವ ಯಾವುದೇ ಸಂಘಟನೆಯಾಗೈರಲಿ ಅಂಥಹ ಸಂಘಟನೆಯನ್ನು ಕಾನೂನು ಚೌಕಟ್ಟಿನಲ್ಲಿ ಕಟ್ಟಿ ಹಾಕುತ್ತೇವೆ ಎಂದರು.

ಅದು ಬಜರಂಗದಳವಾಗಿರಬಹುದು ಅಥವಾ ಪಿಎಫ್ ಐ ಆಗಿರಬಹುದು ಅಥವಾ ಆರ್.ಎಸ್.ಎಸ್ ಸಂಘಟನೆಯೇ ಆಗಿರಬಹುದು ಅಂತಹ ಸಂಘಟನೆಯನ್ನು ಬ್ಯಾನ್ ಮಾಡಲು ಹಿಂದೇಟು ಹಾಕಲ್ಲ ಎಂದು ತಿಳಿಸಿದ್ದಾರೆ.

## 5 ದಿನಗಳವರೆಗೆ 2.17 ಟಿಎಮ್‌ಸಿ ನೀರು ಬಿಡುಗಡೆ: ಶಾಸಕ ಬಾಲಚಂದ್ರ ಜಾರಕಿಹೊಳಿ



ಗೋಕಾಕ: ಹಿಡಕಲ್ ಜಲಾಶಯದಿಂದ ಘಟಪ್ರಭಾ ಎಡದಂಡೆ, ಬಲದಂಡೆ ಮತ್ತು ಸಿಬಿಸಿ ಕಾಲುವೆಗಳಿಗೆ ಜನ ಹಾಗೂ ಜಾನುವಾರಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಇಂದಿನಿಂದ 5 ದಿನಗಳವರೆಗೆ ಒಟ್ಟು 2.17 ಟಿಎಮ್ಸಿ ನೀರನ್ನು ಹರಿಸಲಾಗುತ್ತಿದೆ ಎಂದು ಅರಭಾವಿ ಶಾಸಕ ಮತ್ತು ಕೆಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದ್ದಾರೆ.

ಈ ಬಗ್ಗೆ ಗುರುವಾರ ಸಂಜೆ ಪತ್ರಿಕಾ ಹೇಳಿಕೆಯನ್ನು ನೀಡಿರುವ ಅವರು, ಮೂಡಲಗಿ, ಗೋಕಾಕ, ಹುಕ್ಕೇರಿ, ಚಿಕ್ಕೋಡಿ, ರಾಯಬಾಗ ತಾಲೂಕುಗಳ ಬಹುಗ್ರಾಮ ಕುಡಿಯುವ ನೀರು ಸರಬುರಾಜು ಯೋಜನೆಗಳಿಗೆ ಅನುಕೂಲವಾಗಲು ಕೇವಲ ಕುಡಿಯುವ ನೀರಿನ ಉದ್ದೇಶಕ್ಕಾಗಿ ಮಾತ್ರ ಜಲಾಶಯದಿಂದ ನೀರನ್ನು ಬಿಡಲಾಗುತ್ತಿದೆ ಎಂದು ಅವರ ಹೇಳಿದ್ದಾರೆ.

ಬೇಸಿಗೆಯ ಸಮಯದಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಘಟಪ್ರಭಾ ಬಲದಂಡೆ ಕಾಲುವೆಗೆ 2000 ಕ್ಯೂಸೆಕ್ಸ್, ಘಟಪ್ರಭಾ ಎಡದಂಡೆ ಕಾಲುವೆಗೆ 2400 ಕ್ಯೂಸೆಕ್ಸ್ ಮತ್ತು ಚಿಕ್ಕೋಡಿ ಉಪಕಾಲುವೆಗೆ 500 ಕ್ಯೂಸೆಕ್ಸ್ನಂತೆ ನಾಳೆ ದಿನಾಂಕ 26 ರಂದು ಸಾಯಂಕಾಲ 6 ಗಂಟೆಯಿಂದ ಮುಂದಿನ 5 ದಿನಗಳ ವರೆಗೆ ನೀರನ್ನು ಹರಿಸಲಾಗುತ್ತಿದೆ. ಸಾರ್ವಜನಿಕರು ಇದರ ಸದ್ಬಳಕೆ ಮಾಡಿಕೊಳ್ಳುವಂತೆ ಅವರು ಮನವಿ ಮಾಡಿಕೊಂಡಿದ್ದಾರೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಹಿಡಕಲ್ ಜಲಾಶಯದಿಂದ ನೀರನ್ನು ಹ-ರಿಸುವಂತೆ ಇತ್ತೀಚೆಗೆ ಬೆಳಗಾವಿ ಪ್ರಾದೇಶಿಕ ಆಯುಕ್ತರಿಗೆ ಪತ್ರ ಬರೆದು ಮನವಿ ಮಾಡಿಕೊಂಡಿದ್ದರಿಂದ ಜನ ಹಾಗೂ ಜಾನುವಾರಗಳಿಗೆ ಕುಡಿಯುವ ನೀರಿನ ಸಲುವಾಗಿ ಪ್ರಾದೇಶಿಕ ಆಯುಕ್ತರು ಈ ಬಗ್ಗೆ ಕ್ರಮ ಕೈಗೊಂಡಿದ್ದು, ಕುಡಿಯುವ ನೀರಿಗಾಗಿ ಮಾತ್ರ ಬಳಕೆ ಮಾಡುವಂತೆ ರೈತರಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮನವಿ ಮಾಡಿಕೊಂಡಿದ್ದಾರೆ.

## ಜೆಡಿಎಸ್ ಯುವ ಅಧ್ಯಕ್ಷ ಸ್ಥಾನಕ್ಕೆ ನಿಖಿಲ್ ರಾಜೀನಾಮೆ



ಬೆಂಗಳೂರು: ವಿಧಾನಸಭಾ ಚುನಾವಣೆಯಲ್ಲಿ ರಾಮನಗರದಿಂದ ಸ್ಪರ್ಧಿಸಿ ಸೋಲು ಕಂಡಿದ್ದ ನಿಖಿಲ್ ಕುಮಾರಸ್ವಾಮಿಯವರು ಪಕ್ಷದ ಯುವ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಪಕ್ಷದ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿರುವ ಅವರು, ಹೊಸ ನಾಯಕತ್ವಕ್ಕೆ ಅವಕಾಶ ನೀಡಬೇಕು. ಪಕ್ಷವನ್ನು ಕಟ್ಟುವ ಕಾರ್ಯ ಆಗಬೇಕು. ಸೋಲಿನಿಂದ ನಾನು ಕಂಗೆಟ್ಟಿಲ್ಲ. ಇನ್ನೂ ಮುಂದೆ ದೇವೇಗೌಡರು ಹಾಗೂ ಕುಮಾರಸ್ವಾಮಿಯವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಬೆಳೆಸುವ ಕೆಲಸದಲ್ಲಿ ತೊಡಗಿಕೊಳ್ಳುತ್ತೇನೆ ಎಂದು ರಾಜೀನಾಮೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಚುನಾವಣೆಯಲ್ಲಿ ಸೋಲೇ ಅಂತಿಮವಲ್ಲ. ಸೋತಿದ್ದರೂ ಸಹ ಪಕ್ಷದಿಂದ ದೂರ ಉಳಿಯದೇ ಪಕ್ಷವನ್ನು ಬೆಳೆಸಲು ದುಡಿಯುತ್ತೇನೆ. ಪಕ್ಷ ಮರು ನಿರ್ಮಾಣ ಆಗಬೇಕು. ಅದಕ್ಕಾಗಿಯೇ ನಾನು ರಾಜಿನಾಮೆ ನೀಡುತ್ತಿದ್ದೇನೆ ಎಂದು ಪತ್ರದಲ್ಲಿ ಬರೆದಿದ್ದಾರೆ.

ರಾಮನಗರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಇಕ್ಬಾಲ್ ಹುಸೇನ್ 87,690 ಮತ ಪಡೆದಿದ್ದರೆ, ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ 76,975 ಮತಗಳನ್ನು ಪಡೆದು ಸೋಲು ಕಂಡಿದ್ದರು. ಬಿಜೆಪಿ ಅಭ್ಯರ್ಥಿ ಗೌತಮ್ ಗೌಡ 12,912 ಮತ ಪಡೆದಿದ್ದರು.

## ಹೊಸ ಶಾಸಕರಿಗೆ ಮೂರು ದಿನಗಳ ತರಬೇತಿ ಶಿಬಿರ: ಸ್ಪೀಕರ್ ಯು.ಟಿ. ಖಾದರ್



ಬೆಂಗಳೂರು: ರಾಜ್ಯ ವಿಧಾನಸಭೆಗೆ ಆಯ್ಕೆಯಾದ ಹೊಸ ಶಾಸಕರಿಗೆ ಮೂರು ದಿನಗಳ ಕಾಲ ಟ್ರೈನಿಂಗ್ ಕ್ಯಾಂಪ್ ಆಯೋಜಿಸಲಾಗುವುದು ಎಂದು ನೂತನವಾಗಿ ಆಯ್ಕೆಯಾದ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಹೇಳಿದರು.

ವಿಧಾನಸಭಾ ಸ್ಪೀಕರ್ ಆಗಿ ಆಯ್ಕೆಯಾದ ಬಳಿಕ ಮೊದಲ ಬಾರಿಗೆ ಮಂಗಳೂರಿಗೆ ಆಗಮಿಸಿ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಶೇ.70ರಷ್ಟು ಹೊಸ ಶಾಸಕರು ಈ ಬಾರಿಯ ಸದನದಲ್ಲಿದ್ದಾರೆ. ಸಂಸದೀಯ ವ್ಯವಸ್ಥೆಯಲ್ಲಿನ ನಿಯಮಗಳೇನು?. ಅದನ್ನು ಹೇಗೆ ಪಾಲನೆ ಮಾಡಬೇಕು, ವಿಧಾನಸಭೆಯ ಚರ್ಚೆಯಲ್ಲಿ ಗೌರವ ಹೆಚ್ಚಿಸಿಕೊಂಡು ಜನಸಾಮಾನ್ಯರಿಗೆ ತಮ್ಮ ಬಗ್ಗೆ ಕಾಳಜಿ ಇದೆ ಎಂಬ ಭಾವನೆಯನ್ನು ಹೇಗೆ ಮೂಡಿಸಬೇಕು ಎಂಬ ವಿಚಾರಗಳ ಬಗ್ಗೆ ಮೂರು ದಿನಗಳ ಟ್ರೈನಿಂಗ್ ಕ್ಯಾಂಪ್ನು ನೂತನ ಶಾಸಕರಿಗೆ ನೀಡಲಾಗುವುದು ಎಂದು ಹೇಳಿದರು.

ನಾನು ಸಭಾಧ್ಯಕ್ಷ ಸ್ಥಾನದಲ್ಲಿ ಕುಳಿತುಕೊಂಡು ಹೆಚ್ಚಿನ ಅವಕಾಶಗಳನ್ನು ಯುವಕ-ರಿಗೆ ಮತ್ತು ಹೊಸ ಮುಖಗಳಿಗೆ ನೀಡಲು ಪ್ರಯತ್ನ ಮಾಡುತ್ತೇನೆ. ಸಭಾಧ್ಯಕ್ಷನಾದರೂ ಕ್ಷೇತ್ರದ ಶಾಸಕನಾಗಿ ಸೇವೆ ಸಲ್ಲಿಸುತ್ತೇನೆ. ಕ್ಷೇತ್ರ ಮತ್ತು ಪಕ್ಷದ ಕಾರ್ಯಕರ್ತರ ನಿಕಟ ಸಂಬಂಧ ಇರಿಸಿಕೊಳ್ಳುತ್ತೇನೆ. ಸ್ಪೀಕರ್ ಸ್ಥಾನದ ಘನತೆ ಹೆಚ್ಚಿಸಿ ಕ್ಷೇತ್ರವನ್ನು ಮಾದರಿ ಯಾಗಿಸುತ್ತೇನೆ. ಕರ್ನಾಟಕ ರಾಜ್ಯದ ವಿಧಾನಸಭಾ ಸಭಾಧ್ಯಕ್ಷ ಸ್ಥಾನ ಗೌರವ ಇರುವ ಸ್ಥಾನವಾಗಿದ್ದು, ಇದರ ಗೌರವ ಉಳಿಸುವ ಕಾರ್ಯ ಮಾಡುತ್ತೇನೆ ಮತ್ತು ಜಿಲ್ಲೆಗೆ ಗೌರವ ತರುತ್ತೇನೆ ಎಂದರು.

## ಕೈ ಸರ್ಕಾರದ ಕನಸಿನ ಕೂಸು ಇಂದಿರಾ ಕ್ಯಾಂಟಿನ್‌ಗೆ ಮರುಜೀವ

ಬೆಂಗಳೂರು: ಬಿಜೆಪಿ ಅವಧಿಯಲ್ಲಿ ಹಳ್ಳ ಹಿಡಿದಿದ್ದ ಕೈ ಸರ್ಕಾರದ ಕನಸಿನ ಕೂಸು ಇಂದಿರಾ ಕ್ಯಾಂಟಿನ್ಗೆ ಈಗ ಮತ್ತೆ ಮರುಜೀವ ಬಂದಿದೆ. ನಯಾ ಲುಕ್ ನಲ್ಲಿ ಮತ್ತೆ ಬಡವರ ಫೈವ್ ಸ್ಟಾರ್ ಹೋಟೆಲ್ ಇಂದಿರಾ ಕ್ಯಾಂಟಿನ್ ಲಕ ಲಕ ಅನ್ನಲಿದೆ.

ಕಾಂಗ್ರೆಸ್ ಸರ್ಕಾರ ಬಂದ ಬಳಿಕ ಈಗ ಇಂದಿರಾ ಕ್ಯಾಂಟಿನ್ ಗೆ ಹೊಸ ಲುಕ್ ಬರಲಿದೆ. ಬಿಜೆಪಿ ಅವಧಿಯಲ್ಲಿ ದುಡ್ಡು ಬಿಡುಗಡೆಯಾಗದೇ ನಿರ್ವಹಣೆ ಸಮಸ್ಯೆಯಿಂದ ಇಂದಿರಾ ಕ್ಯಾಂಟಿನ್ ಅವಸಾನದತ್ತ ಹೋಗಿತ್ತು. ಆದರೆ ಈಗ ಕೈ ಸರ್ಕಾರ ಅಸ್ತಿತ್ವಕ್ಕೆ ಬರ್ತಾ ಇದ್ದಂತೆ ಬೆಂಗಳೂರಿನಲ್ಲಿ 198 ವಾರ್ಡ್ ನಲ್ಲಿಯೂ ಇಂದಿರಾ ಕ್ಯಾಂಟಿನ್ ಗೆ ಮತ್ತೆ ಜೀವ ಬರಲಿದೆ.

ಒಂದು ತಿಂಗಳೊಳಗೆ ಹೊಸ ಟೆಂಡರ್ ಇಂದಿರಾ ಕ್ಯಾಂಟಿನ್ ರೀ ಒಪನ್ ಆಗಲಿದೆ. ಈ ಬಾರಿ ಕಳೆದ ಬಾರಿಗಿಂತಲೂ ವೆರೈಟಿ ವೆರೈಟಿ ಫುಡ್ ಮೆನು ಇರಲಿದೆ. ಪೌಷ್ಟಿಕಾಂಶವುಳ್ಳ ತಿಂಡಿ ಕೊಡುವಂತೆ ಸೂಚನೆ ನೀಡಲಾಗಿದೆ. ರಾತ್ರಿಯೂಟಕ್ಕೂ ಡಿಮ್ಯಾಂಡ್ ಮೇಲೆ ಊಟ ಪೂರೈಕೆ ಮಾಡಲಾಗುತ್ತದೆ. ಐದು ರೂಪಾಯಿಂದ ಹತ್ತು ರೂಪಾಯಿಗೆ ದರ ಏರಿಕೆ ಮಾಡಲಾಗುತ್ತಿದ್ದು, ತಿಂಡಿ ಕ್ವಾಂಟಿಟಿ ಜಾಸ್ತಿ ಇರಲಿದೆ.

ಇಂದಿರಾ ಕ್ಯಾಂಟಿನ್ ನಲ್ಲಿ ಈ ಹಿಂದಿನ ಅವಧಿಯಲ್ಲಿ ನಡೆದ ಅಕ್ರಮದ ಬಗ್ಗೆ ಸದ್ಯ ಬಿಬಿಎಂಪಿ ಸೈಲೆಂಟ್ ಆಗಿದೆ. ಬೆಂಗಳೂ-ರಿನಲ್ಲಿ 120-130 ಕ್ಯಾಂಟಿನ್ ಗಳು ಸುಸ್ಥಿತಿಯಲ್ಲಿದೆ. ಆದರೆ ಅಡುಗೆ ಮನೆಗೆ ಹೊಸ ಸಾಮಾಗ್ರಿಗಳು ಬೇಕು ಎನ್ನುವ ನಿರ್ಧಾರಕ್ಕೆ ಬಿಬಿಎಂಪಿ ಬಂದಿದೆ.

## ಎಐಸಿಸಿ ಅಧ್ಯಕ್ಷ ಖರ್ಗೆಗೆ ಬೆಳಗಾವಿ ಕಾಂಗ್ರೆಸ್ ನಿಯೋಗ ಅಭಿನಂದನೆ



ನವದೆಹಲಿ: ಕೆಪಿಸಿಸಿ ಕಾರ್ಯಾಧ್ಯಕ್ಷ, ಸಚಿವ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೆಳಗಾವಿ ಜಿಲ್ಲೆಯ ಎಲ್ಲಾ ಶಾಸಕರು ದೆಹಲಿಯಲ್ಲಿ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.

ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಜಯಗಳಿಸಿ, ಅಸ್ತಿತ್ವಕ್ಕೆ ಬಂದ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲಾ ಕಾಂಗ್ರೆಸ್ ನಿಯೋಗದೊಂದಿಗೆ ಅಖಿಲ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ನ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗಿ ಕುಶಲೋಪರಿ ವಿಚಾರಿಸಿದರು. ಇದೇ ಸಂದರ್ಭದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅವರ ಬಗ್ಗೆ ಎಐಸಿಸಿ ಅಧ್ಯಕ್ಷ ಖರ್ಗೆ ಅವರು ಪ್ರಂಶಸೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ಎಲ್ಲಾ ಶಾಸಕರು, ಪ್ರಮುಖ ಮುಖಂಡರು ಇದ್ದರು.

# ಅಶ್ವತ್ ನಾರಾಯಣ್ ವಿರುದ್ಧ ಎಫ್‌ಐಆರ್ ದಾಖಲು: ಬಿಜೆಪಿ ಆಕ್ಷೇಪ

ಬೆಂಗಳೂರು: ಕ್ಯಾಂಪಸ್ ಫ್ರಂಟ್, ಪಿಎಫ್‌ಐ, ಎಸ್ಡಿಪಿಐ ಕಾರ್ಯಕರ್ತರ ಮೇಲಿದ್ದ ಕೇಸು ರದ್ದು ಮಾಡುವ ನೀವು ನಮ್ಮ ಶಾಸಕರ ಮೇಲೆ ಯಾಕೆ ಎಫ್‌ಐಆರ್ ದಾಖಲಿಸಿದ್ದೀರಿ? ಎಂಥ ಸರಕಾರ ನಿಮ್ಮದು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್ ಅವರು ಆಕ್ರೋಶ ಹೊರಹಾಕಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಹ–ರೀಶ್ ಪೂಂಜ, ಮಾಜಿ ಸಚಿವ ಡಾ. ಅಶ್ವತ್ಥನಾರಾಯಣರ ವಿರುದ್ಧ ಎಫ್‌ಐಆರ್ ಮಾಡಿದ್ದನ್ನು ಆಕ್ಷೇಪಿಸಿದಧರು. ಯಾವ ಕಾರಣಕ್ಕೆ ಎಫ್‌ಐಆರ್ ಮಾಡಿದ್ದೀರಿ ಎಂದು ಮುಖ್ಯಮಂತ್ರಿಗಳನ್ನು ಮತ್ತು ಉಪ ಮುಖ್ಯಮಂತ್ರಿಗಳನ್ನು ಪ್ರಶ್ನಿಸುವುದಾಗಿ ತಿಳಿಸಿದರು.

ನಿಮ್ಮದು ಪಿಎಫ್‌ಐ ಕಾರ್ಯಕರ್ತರನ್ನು ರಕ್ಷಿಸುವ ಸರಕಾರವೇ? ಕ್ಯಾಂಪಸ್ ಫ್ರಂಟ್, ನಕ್ಸಲೀಯರನ್ನು ರಕ್ಷಿಸುವ ಸರಕಾರವೇ? ಹರೀಶ್ ಪೂಂಜ, ಡಾ. ಅಶ್ವತ್ಥನಾರಾಯಣರವರು ಟಿಪ್ಪು ಸುಲ್ತಾನ್ ಜಯಂತಿ ಮಾಡಬಾರದು ಎಂದು ಹೇಳಿದ್ದು ತಪ್ಪೇ? ನಮ್ಮ ಹಿಂದೂ ಧರ್ಮವನ್ನು ನಾಶ ಮಾಡಿದ, ಸಾವಿರಾರು ದೇವಾಲಯ ಧ್ವಂಸ ಮಾಡಿದ, ಲಕ್ಷಾಂತರ ಜನರನ್ನು ಮತಾಂತರ ಮಾಡಿದ ಟಿಪ್ಪು ಸುಲ್ತಾನ್ ಧೋರಣೆಯನ್ನು ಅವರು ಖಂಡಿಸಿದ್ದು ತಪ್ಪೇ ಎಂದು ಪ್ರಶ್ನೆಗಳನ್ನು ಮುಂದಿಟ್ಟರು.



ಕ್ಯಾಂಪಸ್ ಫ್ರಂಟ್, ಪಿಎಫ್‌ಐ, ಎಸ್ಡಿಪಿಐ ಕಾರ್ಯಕರ್ತರ ಮೇಲಿದ್ದ ಕೇಸುಗಳನ್ನು ತೆಗೆದುಹಾಕಿದ್ದೀರಿ. ನಮ್ಮ ಶಾಸಕರ ಮೇಲೆ ಎಫ್‌ಐಆರ್ ಮಾಡಿದ್ದೀರಿ; ಮಂಗಳೂರು ಮತ್ತಿತರ ಕಡೆ ನಮ್ಮ ಕಾರ್ಯಕರ್ತರ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಎಫ್‌ಐಆರ್ ಮಾಡುತ್ತಿಲ್ಲ ಎಂದು ಟೀಕಿಸಿದರು. ನಮ್ಮ ಕಾರ್ಯಕರ್ತರು, ನಮ್ಮ ಶಾಸಕರ ಮೇಲೆಯೇ ಎಫ್‌ಐಆರ್ ಮಾಡುತ್ತೀರಿ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಧರ್ಮ, ಸಮಾಜ ರಕ್ಷಿಸುವವರ ಮೇಲೆ ಎಫ್‌ಐಆರ್ ಮಾಡುವ ಯಾವ ಸರಕಾರ ನಿಮ್ಮದು ಎಂದು ಮುಖ್ಯಮಂತ್ರಿಗಳನ್ನು ಕೇಳಿದರು. ಬಜರಂಗದಳ, ಆರೆಸ್ಸೆಸ್ ರದ್ದು ಮಾಡುವ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, 'ಪ್ರಿಯಾಂಕ್ ಖರ್ಗೆ ಅವ–ರಿನ್ನೂ ಮಗು ಇರಬೇಕು. ಆರೆಸ್ಸೆಸ್ ಏನು ಮಾಡುತ್ತಿದೆ ಎಂದು ಅಧ್ಯಯನ ಮಾಡಬೇಕು; ಆರೆಸ್ಸೆಸ್ ಇರುವ ಕಾರಣ ಪ್ರಪಂಚದಲ್ಲಿ ಭಾರತದ ಗೌರವ ಹೆಚ್ಚಾಗಿದೆ. ಇಡೀ ಪ್ರಪಂಚಕ್ಕೆ ಆರೆಸ್ಸೆಸ್ ಕುರಿತು ಗೌರವ ಇದೆ. ನೀವು ಕೂಪ ಮಂಡೂಕರಾಗಿ ಆರೆಸ್ಸೆಸ್ ಕುರಿತು ಅಧ್ಯಯನ ಮಾಡುತ್ತಿದ್ದೀರಿ' ಎಂದು ಟೀಕಿಸಿದರು.

'ಆರೆಸ್ಸೆಸ್, ಧರ್ಮ ರಕ್ಷಣೆ ಮಾಡುತ್ತಿದೆ. ಬಡವರು, ಕಷ್ಟದಲ್ಲಿ ಇರುವವರ ಸೇವೆ ಮಾಡುತ್ತಿದೆ. ನೀವು ಪಿಎಫ್‌ಐ, ಕ್ಯಾಂಪಸ್ ಫ್ರಂಟ್, ಭಯೋತ್ಪಾದಕ ಸಂಘಟನೆಯನ್ನು ಬ್ಯಾನ್ ಮಾಡುವುದಿಲ್ಲ; ಧರ್ಮ ರಕ್ಷಿಸುವ ಬಜರಂಗದಳವನ್ನು ನಿಷೇಧಿಸಲು ಮುಂದಾಗಿದ್ದೀರಲ್ಲ ಎಂದು ಪ್ರಶ್ನಿಸಿದರು. ಶಿಸ್ತಿನಿಂದ ಶಾಖೆ ಮಾಡುವ, ದೇಶಭಕ್ತಿಯ ಪಾಠ ಹೇಳುವ, ಕೋಟ್ಯಂತರ ಸಂಖ್ಯೆಯ ಸ್ವಯಂಸೇವಕರನ್ನು ಆರೆಸ್ಸೆಸ್ ಸಂಘಟನೆಯನ್ನು ಬ್ಯಾನ್ ಮಾಡುವುದಾಗಿ ಹೇಳುತ್ತೀರಲ್ಲ? ನಿಮಗೆ ಹುಚ್ಚು ಹಿಡಿದಿದೆ' ಎಂದು ಆಕ್ರೋಶದಿಂದ ತಿಳಿಸಿದರು.

ಆರೆಸ್ಸೆಸ್ ಸಂಘಟನೆಯನ್ನು ನೆಹರೂ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಬ್ಯಾನ್ ಮಾಡಿದ್ದರು. ಪರಿಣಾಮ ಏನಾಗಿದೆ ಎಂದು ಪ್ರಿಯಾಂಕ್ ಖರ್ಗೆಯವರು ತಮ್ಮ ಹಿರಿಯರಿಂದ ತಿಳಿದುಕೊಳ್ಳಲಿ. ಆಮೇಲೆ ಬ್ಯಾನ್ ಮಾಡಲಿ ಎಂದು ನುಡಿದರು. ರಾಜ್ಯದಲ್ಲಿ ಕೇಸರೀಕರಣ ಏನಾಗಿದೆ ಎಂದು ಮಾಹಿತಿ ಕೊಡಿ ಎಂದು ಅವರು ಆಗ್ರಹಿಸಿದರು.

ಅಮ್ನೆಸ್ಟಿ ಧೋರಣೆ ಖಂಡನೀಯ– ಎಂ.ಜಿ.ಮಹೇಶ್

ಗೋಹತ್ಯೆ ನಿಷೇಧದ ಕಾನೂನನ್ನು ವಾಪಸ್ ಪಡೆಯಬೇಕು; ಕರ್ನಾಟಕದಲ್ಲಿ ಗೋಹತ್ಯೆಗೆ ಅವಕಾಶ ಕೊಡಬೇಕು, ಹಲಾಲ್ ವ್ಯಾಪಾರಕ್ಕೆ ಅವಕಾಶ ಕೊಡಲು ಅಮ್ನೆಸ್ಟಿ ಇಂಟರ್ ನ್ಯಾಶನಲ್ ಟ್ವೀಟ್ ಮೂಲಕ ಒತ್ತಾಯಿಸಿದೆ. ಭಾರತದ ಆಂತರಿಕ ವಿಚಾರಕ್ಕೆ ಕೈಹಾಕಿದ, ಭಾರತ ವಿರೋಧಿ ಅಮ್ನೆಸ್ಟಿಯ ಧೋರಣೆಯನ್ನು ಖಂಡಿಸುವುದಾಗಿ ರಾಜ್ಯ ಮುಖ್ಯ ವಕ್ತಾರ ಎಂ.ಜಿ.ಮಹೇಶ್ ಅವರು ತಿಳಿಸಿದರು.

ಅಮ್ನೆಸ್ಟಿ, ಕಾಂಗ್ರೆಸ್ ಜನಾದೇಶದ ಹಿನ್ನೆಲೆಯಲ್ಲಿ ದ್ವೇಷಪೂರ್ವಕ ನಡವಳಿಕೆಯನ್ನು ಮುಂದುವರಿಸುವ ಕೆಲಸ ಮಾಡಿದೆ. ಕರ್ನಾಟಕ, ಭಾರತ ಮತ್ತು ಬಹುಸಂಖ್ಯಾತರ ವಿಚಾರದಲ್ಲಿ ಅಮ್ನೆಸ್ಟಿ ಧೋರಣೆಯನ್ನು ಬಿಜೆಪಿ ಖಂಡಿಸುತ್ತದೆ. ಇದಕ್ಕೆ ಅತ್ಯುಗ್ರವಾದ ಹೋರಾಟ ಮಾಡಲಿದ್ದೇವೆ. ಸರಕಾರಕ್ಕೂ ಎಚ್ಚರಿಕೆ ನೀಡುವುದಾಗಿ ತಿಳಿಸಿದರು.

ಕಾಂಗ್ರೆಸ್ ಪಕ್ಷದವರು ಸಂವಿಧಾನ ಮೀರಿ, ಸ್ವಾಯತ್ತ ರಾಜ್ಯ ಎಂದು ಭಾವಿಸಿದರೆ ಅದು ಮೂರ್ಖತನ. ಬಿಜೆಪಿ ಎಚ್ಚರಿಕೆಯನ್ನು ಕೊಡುತ್ತದೆ; ಇಂಥ ದುಸ್ಸಾಹಸವನ್ನು ಜನರು ಸಹಿಸುವುದಿಲ್ಲ ಎಂದು ಹೇಳಿದರು.

## ಬಿಸಿಲಿನ ತಾಪಕ್ಕೆ: ನರೇಗಾ ಕಾರ್ಮಿಕ ಸಾವು



ರಾಯಚೂರು: ರಾಜ್ಯ ರಾಜಧಾನಿ ಬೆಂಗಳೂರಲ್ಲಿ ಪ್ರತಿದಿನ ಮಳೆಯ ಆರ್ಭಟ ಜೋರಾಗಿದ್ರೆ ಶಕ್ತಿನಗರಿ ರಾಯಚೂರಿನಲ್ಲಿ ಬಿಸಿಲಿನ ತಾಪ ವಿಪರೀತವಾಗಿದೆ. ಬಿಸಿಲಿನ ತಾಪ ಹೆಚ್ಚಾಗಿ ನರೇಗಾ ಕೆಲಸ ಮಾಡೋ ವೇಳೆ ಕಾರ್ಮಿಕ ಸಾವನ್ನಪ್ಪಿರೋ ಘಟನೆ ದೇವದುರ್ಗ ತಾಲೂಕಿನ ಮುಂಡರಗಿ ಗ್ರಾಮದ ಬಳಿ ನಡೆದಿದೆ.

ಮೃತ ವ್ಯಕ್ತಿ ಸಿದ್ದಣ್ಣಗೆ 40 ವರ್ಷ ವಯಸ್ಸು. ನರೇಗಾ ಯೋಜನೆ ಅಡಿ ಕೆಲಸಕ್ಕೆ ಹೋಗಿದ್ದ ಕಾರ್ಮಿಕ ಸಿದ್ದಣ್ಣ, ಕರಿಗುಡ್ಡ ಕೆರೆಯ ಹೂಳು ಎತ್ತುವ ಕೆಲಸದಲ್ಲಿ ತೊಡಗಿದ್ದ. ಈ ವೇಳೆ ಏಕಾಏಕಿ ಕುಸಿದು ಬಿದ್ದ ಸಿದ್ದಣ್ಣ, ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಬಿಸಿಲಿನಲ್ಲಿ ಕೆಲಸ ಮಾಡುವ ವೇಳೆ ಸಿದ್ದಣ್ಣ ಅಸ್ವಸ್ಥಗೊಂಡಿದ್ದಾರೆ. ಬಿಸಿಲಿನ ತಾಪಕ್ಕೆ ದೇಹದಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿ ಸುಸ್ತಾಗಿರಬಹುದು. ಜೊತೆಗೆ ಹೃದಯಾಘಾತವಾಗಿ ಸಾವು ಸಂಭವಿಸಿರೋ ಶಂಕೆ ವ್ಯಕ್ತವಾಗಿದೆ.

## ಅನುಮಾನಾಸ್ಪದವಾಗಿ ಯುವಕ ಸಾವು



ಅಥಣಿ: ತಾಲೂಕಿನ ಯಕ್ಕಂಚಿ ಗ್ರಾಮದಲ್ಲಿ ಯುವಕನೊಬ್ಬ ಬಾಬು ಸದಾಶಿವ ಕಿವಡಿ ಇವರ ತೋಟದ ಬೇವಿನ ಮರಕ್ಕೆ ಅನುಮಾನಾಸ್ಪವಾಗಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಸ್ಥಿತಿಯಲ್ಲಿ ಶವ ಪತ್ತೆಯಾದ ಘಟನೆ ಇಂದು ಬೆಳಗಿನ ಜಾವ ನಡೆದಿದೆ. ಶಿವಪ್ಪಾ ಬಾಬು ಕಿವಡಿ (28) ಮೃತ ಯುವಕ. ಸ್ಥಳಕ್ಕೆ ಐಗಳಿ ಪೊಲೀಸ್ ಠಾಣೆ ಪಿಎಸ್‌ಐ, ಅಥಣಿ ಸಿಪಿಆಯ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಪಾಲಕರ ದೂರು ನೀಡಿದ್ದು, ಐಗಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತನಿಖೆ ಚುರುಕುಗೊಳಿಸಲಾಗಿದ್ದು, ಯುವಕನ ಶವದ ಮರಣೋತ್ತರ ಪರೀಕ್ಷೆ ಬಳಿಕ ನಿಜಾಂಶ ಬಯಲಾಗಲಿದೆ.

## ಜೆಸ್ಕಾಂ ಸಿಬ್ಬಂದಿಗೆ ಥಳಿತ; ಕಾಂಗ್ರೆಸ್ ಗ್ಯಾರಂಟಿ ಕಾರಣವಲ್ಲ: ಎಸ್ಪಿ

ಕೊಪ್ಪಳ: ವಿದ್ಯುತ್ ಬಿಲ್ ಬಾಕಿ ವಸೂಲಿಗೆ ಹೋಗಿದ್ದ ಜೆಸ್ಕಾಂ ಸಿಬ್ಬಂದಿಗೆ ವ್ಯಕ್ತಿಯೊಬ್ಬ ಚಪ್ಪಲಿಯಿಂದ ಥಳಿಸಿರುವ ಘಟನೆಯನ್ನು ಕಾಂಗ್ರೆಸ್ ಗ್ಯಾರಂಟಿಗಳನ್ನು ನಂಬಿ ವಿದ್ಯುತ್ ಬಿಲ್ ಕಟ್ಟಲು ಗ್ರಾಹಕ ನಿರಾಕರಿಸಿ, ಜೆಸ್ಕಾಂ ಸಿಬ್ಬಂದಿಗೆ ಹಲ್ಲೆ ನಡೆಸಿದ್ದಾಗಿ ಸುಳ್ಳು ಸಂದೇಶವನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡಲಾಗುತ್ತಿದೆ.

ಆದರೆ ಈ ಘಟನೆ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದಿರುವ ಗ್ರಾಹಕ ಇಲಾಖೆ ಸಿಬ್ಬಂದಿಗೆ ಹಲ್ಲೆ ನಡೆಸಿದ್ದಾನೆಂದು ಕೊಪ್ಪಳ ಎಸ್‌ಪಿ ಸ್ಪಷ್ಟಪಡಿಸಿದ್ದಾರೆ.

ಚಂದ್ರಶೇಖರ್ ಹಿರೇಮಠ್ ಎಂಬವರು 9000 ರೂ. ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿದ್ದರು, ಇದಕ್ಕಾಗಿ ಜೆಸ್ಕಾಂ ವಿದ್ಯುತ್ ಸಂಪರ್ಕ ಕಡಿತಗೊಳಿಸಿತ್ತು. ಆರೋಪಿ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದಿದ್ದಾನೆ ಎನ್ನಲಾಗಿದ್ದು, ಇದನ್ನು ಪ್ರಶ್ನಿಸಿದಾಗ ಅಧಿಕಾರಿಗಳ ಹಲ್ಲೆ ನಡೆಸಿದ್ದಾರೆ ಎಂದು ಎಸ್‌ಪಿ ಸ್ಪಷ್ಟಪಡಿಸಿದ್ದಾರೆ.

ಜೆಸ್ಕಾಂ ಸಿಬ್ಬಂದಿ ಮೇಲೆ ಆರೋಪಿ ಹಲ್ಲೆ ನಡೆಸಿರುವ ವಿಡಿಯೋ ವೈರಲ್ ಆಗಿದ್ದು, ಕಾಂಗ್ರೆಸ್ ಗ್ಯಾರಂಟಿಯನ್ನು ನಂಬಿ ಗ್ರಾಹಕರು ವಿದ್ಯುತ್ ಬಿಲ್ ಕಟ್ಟುತ್ತಿಲ್ಲ, ಬಿಲ್



ಕೇಳಲು ಹೋದ ಸಿಬ್ಬಂದಿಗಳ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಸುಳ್ಳು ಸಂದೇಶ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಕೊಪ್ಪಳದ ಕುಕನಪಲ್ಲಿ ಗ್ರಾಮದಲ್ಲಿ ವಿದ್ಯುತ್ ಬಿಲ್ ವಸೂಲಿಗೆ ಬಂದ ಲೈನ್ಮ್ಯಾನ್‌ಗೆ ವ್ಯಕ್ತಿಯೊಬ್ಬ ಅವಾಚ್ಯ ಶಬ್ದದಿಂದ ನಿಂದಿಸಿದ್ದಲ್ಲದೆ,

ಚಪ್ಪಲಿಯಿಂದ ಹೊಡೆದು ಹಲ್ಲೆ ಮಾಡಿದ್ದಾನೆ. ಲೈನ್ಮ್ಯಾನ್ ಮೇಲೆ ಹಲ್ಲೆ ಮಾಡಿದ್ದ ವ್ಯಕ್ತಿಯನ್ನು ಕೊಪ್ಪಳ ಜಿಲ್ಲೆ ಮುನಿರಾಬಾದ್ ಪೊಲೀಸರು ಬಂಧಿಸಿದ್ದಾರೆ.

ಕೊಪ್ಪಳದಲ್ಲಿ ಎಸ್ಪಿ ಯಶೋಧಾ ವಂಟಗೋಡಿ ಮಾತನಾಡಿ, "ಲೈನ್ಮ್ಯಾನ್ ಮಂಜುನಾಥ ಮೇಲೆ ಚಪ್ಪಲಿಯಿಂದ ಹಲ್ಲೆ ನಡೆಸಿದ ವ್ಯಕ್ತಿ ಚಂದ್ರಶೇಖರಯ್ಯ.

ಈತ ಕಳೆದ ಆರು ತಿಂಗಳಿಂದ ಬಿಲ್ ಬಾಕಿ ಉಳಿಸಿಕೊಂಡಿದ್ದನ. ಅಂದಾಜು 9990 ರೂ. ಬಿಲ್ ಬಾಕಿ ಉಳಿಸಿಕೊಂಡಿದ್ದನು" ಎಂದಿದ್ದಾರೆ.

"ವಿದ್ಯುತ್ ಬಿಲ್ ಕಟ್ಟದ ಹಿನ್ನೆಲೆಯಲ್ಲಿ ಜೆಸ್ಕಾಂ ಸಿಬ್ಬಂದಿ ಚಂದ್ರಶೇಖರಯ್ಯ ಮನೆಯ ಕರೆಂಟ್ ಲೈನ್ ಕಟ್ ಮಾಡಿದ್ದರು.

ಆದರೂ ಮತ್ತೆ ಅನಧಿಕೃತ ವಿದ್ಯುತ್ ಸಂರ್ಪಕ ಪಡೆದಿದ್ದ ಚಂದ್ರಶೇಖರಯ್ಯ. ಅಕ್ರಮ ವಿದ್ಯುತ್ ಸಂಪರ್ಕ ಪಡೆದಿದ್ದನ್ನೇ ಪ್ರಶ್ನಿಸೋಕೆ ಬಂದಿದ್ದ ಸಿಬ್ಬಂದಿ ಮೇಲೆ ಹಲ್ಲೆ ಮಾಡಿದ್ದಾನೆ.

ಹಲ್ಲೆ ನಡೆಸಿದ ಚಂದ್ರಶೇಖರಯ್ಯ ವಿರುದ್ಧ ಮಂಜುನಾಥ್ ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಹೀಗಾಗಿ ಚಂದ್ರಶೇಖರಯ್ಯ ಅವರನ್ನು ಬಂಧಿಸಿದ್ದೇವೆ. ಮುಂದೆ ಕಾನೂನು ಕ್ರಮ ಕೈಗೊಳ್ಳುತ್ತೇವೆಂದು" ಎಂದು ಎಸ್‌ಪಿ ತಿಳಿಸಿದ್ದಾರೆ.

## ಸಂಗಾತಿ ಕೊಂದು ದೇಹದ ಭಾಗಗಳನ್ನು ತುಂಡರಿಸಿ ಫ್ರಿಡ್ಜ್‌ನಲ್ಲಿ ಇರಿಸಿದ್ದ ಭೂಪ



ಹೈದರಾಬಾದ್: ಇಡೀ ದೇಶದ ಗಮನ ಸೆಳೆದಿದ್ದ ಶ್ರದ್ಧಾ ವಾಲಕರ್ ಹಾಗೂ ನಿಕ್ಕಿ ಯಾದವ್ ಭೀಕರ ಕೊಲೆಯನ್ನು ಹೋಲುವ ಪ್ರಕರಣ ಹೈದರಾಬಾದ್‌ನಲ್ಲಿ ನಡೆದಿದೆ.

ವ್ಯಕ್ತಿಯೊಬ್ಬ ತನ್ನ ಸಹಜೀವನ ಸಂಗಾತಿಯನ್ನು ಕೊಲೆ ಮಾಡಿ, ದೇಹದ ಭಾಗಗಳನ್ನು ತುಂಡರಿಸಿ ಫ್ರಿಡ್ಜ್‌ನಲ್ಲಿ ಇರಿಸಿದ್ದಾರೆ.

ಮೇ 17 ರಂದು ಹೈದರಾಬಾದ್‌ನ ಮುಸಿ ನದಿ ಬಳಿ ರುಂಡವೊಂದು ಪತ್ತೆಯಾಗಿದ್ದು, ತನಿಖೆ ಮಾಡಿದಾಗ ಪೊಲೀಸರಿಗೆ ವಿಷಯ ಗೊತ್ತಾಗಿದೆ.

ಘಟನೆ ಸಂಬಂಧ ಬಿ. ಚಂದ್ರಮೋಹನ್ (48) ಎಂಬಾತನ್ನು ಪೊಲೀಸರು ಬಂಧಿಸಿದ್ದಾರೆ.

ಸ್ಟಾಕ್ ಮಾರುಕಟ್ಟೆಯಲ್ಲಿ ಆನ್‌ಲೈನ್ ಟ್ರೇಡಿಂಗ್ ನಡೆಸುತ್ತಿದ್ದ ಈತನಿಗೆ 55 ವರ್ಷದ ಯರ್ರಂ ಅನುರಾಧ ರೆಡ್ಡಿ ಎಂಬರ ಜತೆ ಕಳೆದ 15 ವರ್ಷಗಳಿಂದ ಅನೈತಿಕ ಸಂಬಂಧ ಇತ್ತು. ಗಂಡನಿಂದ ಬೇರೆಯಾಗಿದ್ದ ಅನುರಾಧ ಆರೋಪಿ ಚಂದ್ರಮೋಹನ್ ಜತೆಗೆ ದಿಲ್‌ಖುಷ್ ನಗರದಲ್ಲಿರುವ ಚೈತನ್ಯಪುರಿ ಕಾಲೋನಿಯಲ್ಲಿ ವಾಸವಾಗಿದ್ದರು.

ಬಡ್ಡಿಗೆ ಹಣ ನೀಡುತ್ತಿದ್ದ ಅನುರಾಧ, ಮೋಹನ್‌ಗೂ 7 ಲಕ್ಷ ಸಾಲ ನೀಡಿದ್ದರು. ಈ ನಡುವೆ ಹಣ ಹಿಂದಿರುಗಿಸಲು ಒತ್ತಾಯಿಸಿದ್ದಾರೆ. ಈ ವೇಳೆ ಅವರನ್ನು ಕೊಲೆ ಮಾಡಲು ಚಂದ್ರಮೋಹನ್ ಯೋಜನೆ ಹಾಕಿಕೊಂಡಿದ್ದಾನೆ.

ಮೇ 12 ರಂದು ಇವರಿಬ್ಬರ ನಡುವೆ ಮನೆಯಲ್ಲಿಯೇ ಜಗಳ ನಡೆದಿದ್ದು, ಈ ವೇಳೆ ಆರೋಪಿ, ಅನುರಾಧ ಮೇಲೆ ಚಾಕುವಿನಿಂದ ಇರಿದಿದ್ದಾನೆ. ಎದೆ ಹಾಗೂ ಹೊಟ್ಟೆಗೆ ಗಂಭೀರ ಗಾಯ ಉಂಟಾಗಿ ಅನುರಾಧ ಸಾವಿಗೀಡಾಗಿದ್ದಾರೆ.

ಕೊಲೆ ಮಾಡಿದ ಬಳಿಕ ಆತ, ಸಣ್ಣ ಕಲ್ಲು ತುಂಡರಿಸುವ ಯಂತ್ರ ತಂದು, ದೇಹವನ್ನು ತುಂಡು ತುಂಡು ಮಾಡಿದ್ದಾನೆ.

ರುಂಡವನ್ನು ಕತ್ತರಿಸಿ ಪಾಲಿಥಿನ್ ಚೀಲದಲ್ಲಿ ಸುತ್ತಿಟ್ಟಿದ್ದಾನೆ. ಕೈ, ಕಾಲುಗಳನ್ನು ತುಂಡರಿಸಿ ಫ್ರಿಡ್ಜ್‌ನಲ್ಲಿ ಇರಿಸಿದ್ದಾನೆ.

ಮೇ 15 ರಂದು ಆಟೋ ರಿಕ್ಷಾವೊಂದರಲ್ಲಿ ತೆರಳಿ ರುಂಡವನ್ನು ಮುಸಿ ನದಿ ಬಳಿ ಎಸೆದಿದ್ದಾನೆ. ಈ ನಡುವೆ ಫಿನಾಯಿಲ್, ಕರ್ಪೂರ, ಆಗರಬತ್ತಿಗಳನ್ನು ತಂದು ದೇಹದ ಭಾಗಗಳಿಗೆ ಸಿಂಪಡಿಸಿ, ದುರ್ನಾತ ಬೀರದಂತೆ ನೋಡಿಕೊಂಡಿದ್ದಾನೆ. ತುಂಡು ಮಾಡಿರುವ ದೇಹದ ಭಾಗಗಳನ್ನು ವಿಲೇವಾರಿ ಮಾಡುವ ಬಗ್ಗೆ ಯೂಟ್ಯೂಬ್‌ನಲ್ಲಿ ವಿಡಿಯೊ ನೋಡಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ.

ಇದೇ ವೇಳೆ ಅನುರಾಧ ಇನ್ನೂ ಬದುಕಿದ್ದಾರೆ ಎಂದು ನಂಬಿಸಲು, ಅವರ ಪರಿಚಯಸ್ಥರಿಗೆ ಆಗಾಗ್ಗೆ ಮೆಸೇಜ್ ಕೂಡ ಮಾಡುತ್ತಿದ್ದ.

ಮೇ 17 ರಂದು ಮುಸಿ ನದಿ ಬಳಿಕ ಕಸ ವಿಲೇವಾರಿ ಮಾಡುತ್ತಿದ್ದ ಪೌರ ಕಾರ್ಮಿಕ–ರಿಗೆ ರುಂಡ ಕಂಡು ಬಂದಿದೆ. ಅವರು ನೀಡಿದ ಮಾಹಿತಿ ಅನ್ವಯ ಮಾಲಕ್‌ಪೇಟ್ ಪೊಲೀಸರು ದೂರು ದಾಖಲಿಸಿ ತನಿಖೆ ಆರಂಭಿಸಿದ್ದಾರೆ.

ಹಲವು ಸಿಸಿಟಿವಿ ದೃಶ್ಯಾವಳಿಗಳು, ತಂತ್ರಜ್ಞಾನಗಳ ಮೊರೆ ಹೋದ ಪೊಲೀಸರು, ಆರೋಪಿಯನ್ನು ಪತ್ತೆಹಚ್ಚಿ ಬಂಧಿಸುವಲ್ಲಿ ಸಫಲರಾಗಿದ್ದಾರೆ. ಆರೋಪಿ ತನ್ನ ಕೃತ್ಯವನ್ನು ಒಪ್ಪಿಕೊಂಡಿದ್ದು, ಪೊಲೀಸರು ಸಂತ್ರಸ್ತೆ ದೇಹದ ಭಾಗಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

# ಟೇಕಾಫ್ ಆಗಿಲ್ಲ, ಆಗಲೇ ಶೇಕ್ ಆಗಲು ತೊಡಗಿದೆ ಸರಕಾರ

**ಎಚ್.ಮಾರುತಿ**

ಸ್ಪಷ್ಟ ಬಹುಮತ ನೀಡಿದ್ದರೂ ಆರಂಭದಲ್ಲೇ ಅಪಸ್ವರ ಕೇಳಿ ಬರುತ್ತಿದೆ. ಸಚಿವ ಎಂ.ಬಿ. ಪಾಟೀಲ್ ಅವರ ಸಿದ್ದರಾಮಯ್ಯ ಪೂರ್ಣಾವಧಿ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂಬ ಹೇಳಿಕೆ ಕಾಂಗ್ರೆಸ್‌ನಲ್ಲಿ ಭಿನ್ನಮತದ ಕಿಡಿ ಹೊತ್ತಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣಗಳ ಮಧ್ಯದ ತಿಕ್ಕಾಟಕ್ಕೆ ತುಪ್ಪ ಸುರಿದಂತಾಗಿದ್ದು, ವಿಪಕ್ಷಗಳಿಗೆ ಆರಂಭದಲ್ಲೇ ಆಹಾರವಾಗುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ.

ಪಾಟೀಲರ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಿರುವ ಕಾಂಗ್ರೆಸ್ ಹೈಕಮಾಂಡ್, ಅಧಿಕಾರ ಹಂಚಿಕೆ ಸೂತ್ರದ ಬಗ್ಗೆ ಯಾರೊಬ್ಬರೂ ಚರ್ಚಿಸಬಾರದು ಎಂದು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಬಣದ ಸಚಿವರು ಮತ್ತು ಶಾಸಕರಿಗೆ ಖಡಕ್ ಎಚ್ಚರಿಕೆ ನೀಡಿದೆ.

ಮೈಸೂರಿನ ಸುತ್ತೂರಿನಲ್ಲಿ ಮಾತನಾಡಿದ್ದ ಎಂ.ಬಿ. ಪಾಟೀಲ್, ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರೇ ಪೂರ್ಣಾವಧಿ ಇರಲಿದ್ದಾರೆ. ಅಧಿಕಾರ ಹಂಚಿಕೆ ಬಗ್ಗೆ ಯಾವುದೇ ಮಾತುಕತೆ ನಡೆದಿಲ್ಲ ಎಂದು ಹೇಳಿದ್ದರು. ಈ ಹೇಳಿಕೆ ಸಾಕಷ್ಟು ಚರ್ಚೆಗೆ ಗ್ರಾಸವೊದಗಿಸಿತು. ಪೂರ್ಣ ಪ್ರಮಾಣದ ಸಂಪುಟ ರಚನೆಯಾಗಿಲ್ಲ. ಖಾತೆಗಳ ಹಂಚಿಕೆಯಾಗಿಲ್ಲ. ಸರಕಾರ ಟೇಕಾಫ್ ಆಗಿಲ್ಲ, ಆಗಲೇ ಶೇಕ್ ಆಗಲು ತೊಡಗಿದೆ.

ತಮ್ಮ ಹೇಳಿಕೆ ವಿವಾದಕ್ಕೀಡಾಗುತ್ತಿದ್ದಂತೆಯೇ ಸ್ಪಷ್ಟನೆ ನೀಡಿರುವ ಪಾಟೀಲರು, ಪಕ್ಷದ ವರಿಷ್ಠರು ಹೇಳಿದ್ದನ್ನಷ್ಟೇ ಹೇಳಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಂದು ನಮ್ಮ ನಾಯಕರು ಹೇಳಿದ್ದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸುದ್ದಿಗೋಷ್ಠಿಯಲ್ಲಿ ಏನು ಹೇಳಿದ್ದರೋ ಅದನ್ನೇ ನಾನು ಹೇಳಿದ್ದೇನೆ. ಅಧಿಕಾರ ಹಂಚಿಕೆ ಇಲ್ಲ. ಇದ್ದರೆ ಅದು ಜನರ ಜೊತೆ ಮಾತ್ರ ಎಂದೂ ವೇಣುಗೋಪಾಲ್ ಹೇಳಿದ್ದರು. ಕೆಪಿಸಿಸಿ ಅಧ್ಯಕ್ಷರಾಗಿ ಡಿ.ಕೆ. ಶಿವಕುಮಾರ್ ಮುಂದುವರೆಯುತ್ತಾರೆ ಎಂದೂ ಹೇಳಿದ್ದರು. ನಾನು ಅದನ್ನೂ ಹೇಳಿದ್ದೇನೆ. ಅಧಿಕಾರ ಹಂಚಿಕೆಯ ಸಂಧಾನ ಸೂತ್ರ ನನಗೆ ಗೊತ್ತಿಲ್ಲ. ನಾನು ವೈಯಕ್ತಿಕವಾಗಿ ಮಾತನಾಡಿಲ್ಲ ಎಂದು ಸಮಜಾಯಿಷಿ ನೀಡುವ ಪ್ರಯತ್ನ ಮಾಡಿದ್ದಾರೆ.

ಆದರೆ, ಪಾಟೀಲರ ಹೇಳಿಕೆಯನ್ನು ರಾಜ–ಕೀಯ ಪಡಸಾಲೆಯಲ್ಲಿ ಹತ್ತಾರು ರೀತಿಯಲ್ಲಿ ವಿಶ್ಲೇಷಿಸಲಾಗುತ್ತಿದೆ. ಪಾಟೀಲರು ಸಿದ್ದರಾಮಯ್ಯ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಸಚಿವರು. ಈ ಹಿಂದಿನ ಸರ್ಕಾರದಲ್ಲಿ ಸಂಪುಟದಲ್ಲಿ ಜಲಸಂಪನ್ಮೂಲ ಸಚಿವರಾಗಿ ಮುಕ್ತವಾಗಿ ಕಾರ್ಯ ನಿರ್ವಹಿಸಿದ್ದರು.

ಸಂಪುಟ ಸೇರಿದ ಎಂಟು ಸಚಿವರ ಜೊತೆಯಲ್ಲೇ ಮೊದಲ ಪಟ್ಟಿಯಲ್ಲಿ ಅವರೂ ಪ್ರಮಾಣವಚನ ಸ್ವೀಕ–ರಿಸಲು ಸಿದ್ದರಾಮಯ್ಯ ಕಾರಣ ಎನ್ನುವುದು ಗುಟ್ಟೇನು ಅಲ್ಲ. ಈ ರೀತಿಯ ಹೇಳಿಕೆಯನ್ನು ಸಿದ್ದರಾಮಯ್ಯ ಅವರೇ ಪಾಟೀಲರಿಂದ ಕೊಡಿಸುವ ಮೂಲಕ ಅಧಿಕಾರ ಹಂಚಿಕೆ ಸೂತ್ರ ಎನ್ನುವುದೇ ಇಲ್ಲ ಎಂಬ ಸಂದೇಶ ರವಾನಿಸಿದ್ದಾರೆ ಎಂದೂ ವ್ಯಾಖ್ಯಾನಿಸಲಾಗುತ್ತಿದೆ.

**ಗರಂ ಆದ ಡಿಕೆ ಸಹೋದರರು**

ಪಾಟೀಲರ ಹೇಳಿಕೆ ಡಿ.ಕೆ. ಶಿವಕುಮಾರ್ ಸಹೋದರರರನ್ನು ಕೆರಳಿಸಿದೆ. ಪಕ್ಷದ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಮತ್ತಿತರ ನಾಯಕರ ಜೊತೆ ಈ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಅವರು, 'ಎಂ.ಬಿ. ಪಾಟೀಲರಿಗೆ ಆ ಹೇಳಿಕೆ ನೀಡಲು ಅಧಿಕಾರ ಕೊಟ್ಟವರು ಯಾರು? ಅವರೇನು ಪಕ್ಷದ ಹೈಕಮಾಂಡೇ? ಎಂದು ಪ್ರಶ್ನಿಸಿದ್ದಾರೆ. ಅಷ್ಟೇ ಅಲ್ಲ, ಇದೇ ರೀತಿ ವರ್ತನೆ ಮುಂದುವರಿದರೆ ಪಕ್ಷದ ಅಧ್ಯಕ್ಷನಾಗಿ ಮುಂದುವರಿಯುವುದು ನನಗೆ ಕಷ್ಟವಾಗಲಿದೆ ಎಂದು ಆಕ್ರೋಶ ಹೊರ ಹಾಕಿದ್ದಾರೆ ಎಂದೂ ಗೊತ್ತಾಗಿದೆ. ಶಿವಕುಮಾರ್ ಸಹೋದರ, ಸಂಸದ ಡಿ.ಕೆ. ಸುರೇಶ್ ಕೂಡಾ ಕೆಂಡಾಮಂಡಲವಾಗಿದ್ದಾರೆ.

ಪಾಟೀಲರ ಹೇಳಿಕೆ ವಿವಾದದ ಸ್ವರೂಪ ಪಡೆದುಕೊಳ್ಳುತ್ತಿದೆ ಎಂದು ಅರಿವಾಗುತ್ತಿದ್ದಂತೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲಾ, ಪಕ್ಷದ ನಾಯಕರು ಪರಸ್ಪರ ಹೇಳಿಕೆಗಳನ್ನು ನೀಡದಂತೆ ತಾಕೀತು ಮಾಡಿದ್ದಾರೆ.

ಈ ವಿಚಾರ ಮಲ್ಲಿಕಾರ್ಜುನ ಖರ್ಗೆ, ವೇಣುಗೋಪಾಲ್, ಸುರ್ಜೇವಾಲಾ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಅವರಿಗೆ ಮಾತ್ರ ಗೊತ್ತಿದೆ. ಇದು ಆಂತರಿಕವಾಗಿ ನಡೆದಿರುವ ಚರ್ಚೆ. ಅವರನ್ನು ಬಿಟ್ಟು ಬೇರೆಯವರಿಗೆ ಈ ವಿಚಾರ ಗೊತ್ತಿಲ್ಲ. ಶಾಸಕಾಂಗ ಪಕ್ಷದ ಸಭೆಯಲ್ಲೂ ಈ ವಿಚಾರ ಚರ್ಚೆ ಆಗಿಲ್ಲ. ಸಿದ್ದರಾಮಯ್ಯ ಮುಖ್ಯಮಂತ್ರಿ, ಡಿ.ಕೆ. ಶಿವಕುಮಾರ್ ಉಪ ಮುಖ್ಯಮಂತ್ರಿ ಎಂದು ಹೇಳಿದ್ದರು. ಅಷ್ಟು ಮಾತ್ರ ನಮಗೆ ಗೊತ್ತು. ಈಗ ಅಧಿಕಾರ ಹಂಚಿಕೆ ವಿಚಾರ ಏಕೆ ಚರ್ಚೆ ಮಾಡಬೇಕು? ಆ ಬಗ್ಗೆ ಏನು ಚರ್ಚೆ ಆಗಿದೆಯೆಂದು ಗೊತ್ತಿಲ್ಲ. 2013ರಲ್ಲಿ ಈ ಬಗ್ಗೆ

ಚರ್ಚೆ ಆಗಿದೆಯೇ? ಈಗ ಚರ್ಚೆ ಏಕೆ ಎಂದು ಹಲವು ಶಾಸಕರು ಪ್ರಶ್ನಿಸುತ್ತಾರೆ. ಅಧಿಕಾರ ಹಂಚಿಕೆ ಕು–ರಿತು ಏನೇ ಮಾತುಕತೆ ಆಗಿದ್ದರೂ, ಎಐಸಿಸಿ ಅಧ್ಯಕ್ಷರು, ಉಸ್ತುವಾರಿ ಮತ್ತು ಇಬ್ಬರು ನಾಯಕರ ನಡುವೆ ಮಾತ್ರ ಆಗಿದೆ. ಈ ನಾಲ್ವರಿಗೆ ಮಾತ್ರ ಸತ್ಯ ಗೊತ್ತಿದೆ. ವರಿಷ್ಠರ ತೀರ್ಮಾನದಂತೆ ಎಲ್ಲವೂ ನಡೆಯುತ್ತದೆ ಎಂದೂ ಹೆಸರು ಹೇಳಲು ಇಚ್ಛಿಸದ ಸಚಿವರೊಬ್ಬರು ಹೇಳುತ್ತಾರೆ.

**ಪಾಟೀಲರ ಮೂಲಕ ಸಂದೇಶ ಸಂದೇಹ**

ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲು ಬಿಡುವುದಿಲ್ಲ. ಅವರನ್ನು ಆಗಲು ಸಿದ್ದರಾಮಯ್ಯ ಬಿಡುವುದಿಲ್ಲ. ಸಿದ್ದರಾಮಯ್ಯ ಅವರು ಪಾಟೀಲರ ಹೇಳಿಕೆಯ ಮೂಲಕ ಸಂದೇಶ ರವಾನಿಸಿದ್ದಾರೆ. ಇದು ಡಿಕೆಶಿಗೆ ನೇರವಾದ ಎಚ್ಚ–ರಿಕೆ. ಬಹುಮತ ಸಿಕ್ಕಿದ ನಂತರವೂ ಈವರೆಗಿನ ಬೆಳವಣಿಗೆಗಳನ್ನು ಗಮನಿಸಿದಾಗ ಈ ಸರ್ಕಾರ



ಸ್ಥಿರವಾಗಿರಲಿದೆ ಎಂಬ ಯಾವ ಲಕ್ಷಣವೂ ಕಾಣುತ್ತಿಲ್ಲ. ಗ್ಯಾರಂಟಿಯೂ ಇಲ್ಲ. ದೆಹಲಿಯ ತಮ್ಮ ಹೈಕಮಾಂಡಿಗೆ ಕಪ್ಪ ಪೂರೈಸಬೇಕಾದ ಏಕೈಕ ಮಾನದಂಡದಲ್ಲಿ ಎಟಿಎಂ ಸರ್ಕಾರ ರಚನೆಯಾಗಿದೆ. ಅದಷ್ಟೇ ಈ ಸರ್ಕಾರದ ಆದ್ಯತೆಯಾಗಿರುವುದು ರಾಜ್ಯದ ದುರಂತ ಎಂದು ಬಿಜೆಪಿ ಟ್ವೀಟ್ ಮಾಡಿದೆ.

**ಡಿಕೆ ಸುರೇಶ್ ಕೆಂಡಾಮಂಡಲ**

ಮುಖ್ಯಮಂತ್ರಿ ಸ್ಥಾನ ಹಂಚಿಕೆ ವಿಚಾರವಾಗಿ ಸಚಿವ ಎಂ.ಬಿ. ಪಾಟೀಲ್ ಹೇಳಿಕೆಗೆ ಸಂಸದ ಡಿಕೆ ಸುರೇಶ್ ಕೆಂಡಾಮಂಡಲರಾಗಿ ನೇರ ಎಚ್ಚರಿಕೆ ಕೊಟ್ಟಿದ್ದಾರೆ. ಎಂ.ಬಿ. ಪಾಟೀಲ್ ಹೇಳಿಕೆಗೆ ತೀಕ್ಷ್ಣವಾದ ಪ್ರತಿಕ್ರಿಯೆ ಕೊಡಬಲ್ಲೆ. ಆದರೆ ಈಗ ಅದು ಬೇಡ ಎಂದು ತಿರುಗೇಟು ನೀಡಿದರು. ಅವರ ಹೇಳಿಕೆಗೆ ಹೆಚ್ಚಿನ ಮಾಹಿತಿ ಬೇಕಾದರೆ ಸುರ್ಜೇವಾಲರನ್ನೇ ಕೇಳಿ ಎಂದರು.

ವಿಧಾನಸೌಧದಲ್ಲಿಂದು ಡಿಕೆ.ಸುರೇಶ್ ಹಾಗೂ ಎಂಬಿ ಪಾಟೀಲ್ ಇಬ್ಬರು ಮುಖಾಮುಖಿಯಾಗಿದ್ದು, ಉಭಯ ನಾಯಕರ ನಡುವೆ ಮಾತಿನ ಸಮರ ಇದಕ್ಕೆ ಇಂಬು ನೀಡಿದಂತಾಗಿದೆ.

ವಿಧಾನಸೌಧದಲ್ಲಿ ಎಂ.ಬಿ. ಪಾಟೀಲ್ ಅವರನ್ನು ಮೊದಲಿಗೆ ಗುರಾಯಿಸಿದ ಡಿಕೆ.ಸುರೇಶ್ ಅವರು, ಇದೆಲ್ಲಾ ಸರಿ ಇರಲ್ಲ ಎಂದು ಬಹಿರಂಗವಾಗಿಯೇ ಎಚ್ಚರಿಕೆ ನೀಡಿದ್ದಾರೆ.

ಬಳಿಕ ಪ್ರತಿಕ್ರಿಯಿಸಿದ ಎಂಬಿ ಪಾಟೀಲ್ ರೌಡಿಸಂ ರೀತಿಯಲ್ಲಿ ಮಾತನಾಡ್ತೀರಿ, ಚೆಂಬರ್‌ಗೆ ಬನ್ನಿ ಮಾತನಾಡೋಣ, ಏನ್ ವಿಷಯ ಇದೆ ಬಗೆಹರಿಸೋಣ ಬನ್ನಿ ಎಂದು ಕರೆದಿದ್ದಾರೆ. ಈ ವೇಳೆ ಸಿಟ್ಟಿನಲ್ಲಿಯೇ ಮರು ಮಾತನಾಡಿದ ಡಿಕೆ ಸುರೇಶ್ ಮಾತನಾಡುವ ಮುನ್ನ ಎಚ್ಚರವಿರಲಿ ಎಂದು ಹೇಳಿ ಹೊರಟು ಹೋಗಿದ್ದಾರೆ.

ಇಬ್ಬರ ನಡುವೆ ಸಣ್ಣದಾಗಿಯೇ ಮಾತಿನ ಚಕಮಕಿ ನಡೆದಿದ್ದು, ಅಲ್ಲಿದ್ದ ಇತರ ಶಾಸಕರು ಇಬ್ಬರನ್ನು ಸಮಾಧಾನಪಡಿಸುವ ಕೆಲಸ ಮಾಡಿದ್ದಾರೆ.ಯಾರೂ ಕೂಡ ಅನಗತ್ಯ ಹೇಳಿಕೆಗಳನ್ನು ನೀಡಬಾರದು. ಒಳ್ಳೆಯ ಆಡಳಿತ ನೀಡುವುದಷ್ಟೇ ಈಗ ನಮ್ಮ ಆದ್ಯತೆ. ಇದರ ಕಡೆ ಗಮನ ಕೊಡಬೇಕಿದೆ. ಇದರ ಹೊರತಾಗಿ ಯಾವುದೇ ಗೊಂದಲದ ಹೇಳಿಕೆಗಳನ್ನು ನೀಡಬಾರದು. ಗೊಂದಲ ಮೂಡಿಸುವ ಹೇಳಿಕೆಗಳೂ ಸೇರಿದಂತೆ ಎಲ್ಲವನ್ನೂ ಎಐಸಿಸಿ ಗಮನಿಸುತ್ತದೆ. ಯಾವುದೇ ವಿಷಯಗಳಿದ್ದರೂ ಎಐಸಿಸಿ ನಾಯಕರು ತೀರ್ಮಾನ ಕೈಗೊಳ್ಳುತ್ತಾರೆ ಎಂದು ಕಾಂಗ್ರೆಸ್‌ನ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಎಚ್ಚರಿಕೆ ನೀಡಿದ್ದಾರೆ.

ಎಂ ಬಿ ಪಾಟೀಲ್ ಹೇಳಿಕೆ ಬಗ್ಗೆ ಡಿಸಿಎಂ ಡಿ. ಕೆ. ಶಿವಕುಮಾರ್ ಪ್ರತಿಕ್ರಿಯೆ ನೀಡಿ, ಯಾರಾದರೂ ಏನು ಬೇಕಾದರೂ ಹೇಳಿಕೊಳ್ಳಲಿ. ನಾನು ಆ ಬಗ್ಗೆ ಏನೂ ಮಾತಾಡುವುದಿಲ್ಲ. ಅಧಿಕಾರ ಮತ್ತಿತರ ಪಕ್ಷದ ವಿಚಾರಗಳನ್ನು ನೋಡಿಕೊಳ್ಳಲು ಎಐಸಿಸಿ ಇದೆ. ಕಾಂಗ್ರೆಸ್ ರಾಷ್ಟ್ರೀಯ ಮುಖಂಡರು ಇದ್ದಾರೆ. ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಮಾತ್ರ ನಮ್ಮ ಆದ್ಯತೆ ಎಂದು ಹೇಳಿದ್ದಾರೆ.

ಎಂ.ಬಿ. ಪಾಟೀಲ್ ಮಾತುಗಳನ್ನು ಕೇಳಿದರೆ ಡಿ.ಕೆ. ಶಿವಕುಮಾರ್ ಸಿಎಂ ಕನಸು ಮರಿಚೀಕೆ ಎಂದು ಅನಿಸತೊಡಗಿದೆ. ಸಿಎಂ ಕುರ್ಚಿಗಾಗಿ ನಡೆದ ಜಟಾಪಟಿಗೆ ಹೈ ಕಮಾಂಡ್ ಸುಸ್ತು ಹೊಡೆದಿತ್ತು. ತಲಾ 30 ತಿಂಗಳ ಅಧಿಕಾರ ಹಂಚಿಕೆಯ ಸೂತ್ರ ಹೆಣೆದು ಎಲ್ಲವೂ ತಣ್ಣಗಾಗಿದೆ ಎಂದು ಅಂದು ಕೊಳ್ಳುತ್ತಿರುವಾಗಲೇ ಪಾಟೀಲ್ ಹೇಳಿಕೆಯನ್ನು ಬಿಜೆಪಿ ಪ್ರಬಲವಾಗಿ ಬಳಸಿಕೊಳ್ಳುತ್ತಿದೆ.

**ಪರ್ಯಾಯ ಲಿಂಗಾಯತ ನಾಯಕತ್ವಕ್ಕೆ ಡಿಕೆಶಿ ಕುಮ್ಮಕ್ಕು ?**

ಅವಕಾಶ ಸಿಕ್ಕಾಗಲೆಲ್ಲಾ ಪಾಟೀಲ್, ಡಿಕೆಶಿ ವಿರುದ್ಧ ಕಿಡಿ ಕಾರುತ್ತಲೇ ಬರುತ್ತಿದ್ದಾರೆ. ಅವರು ಇಷ್ಟಕ್ಕೇ ಸುಮ್ಮನಾಗಿರಲಿಲ್ಲ. ಶಿವಕುಮಾರ್ ಅವರನ್ನು ಬಲವಾಗಿಯೇ ಕೆಣಕಿದ್ದರು. ಒಕ್ಕಲಿಗರ ಪ್ರಾಬಲ್ಯವಿರುವ ಹಳೆ ಮೈಸೂರು ಭಾಗದಲ್ಲಿ ಕಾಂಗ್ರೆಸ್ ನಾಶಕ್ಕೆ ಶಿವಕುಮಾರ್ ಅವರೇ ಕಾರಣ. ಅವರ ದರ್ಪದ ನುಡಿ, ಬಾಡಿ ಲ್ಯಾಂಗ್ವೇಜ್ ಗೆ ಆ ಭಾಗದಲ್ಲಿ ಕಾಂಗ್ರೆಸ್ ಸಂಪೂರ್ಣ ನಾಶವಾಗಿದೆ ಎಂದು ಪಾಟೀಲ್ ನೇರವಾಗಿಯೇ ಹೇಳಿದ್ದರು. 2018 ರ ಚುನಾವಣೆಯಲ್ಲಿ ಹಳೆ ಮೈಸೂರು ಭಾಗದಲ್ಲಿ ಜೆಡಿಎಸ್ ನಿಂದ 23 ಒಕ್ಕಲಿಗರು ಗೆದ್ದರೆ ಕಾಂಗ್ರೆಸ್ ನಿಂದ 11 ಶಾಸಕರು ಮಾತ್ರ ಆಯ್ಕೆಯಾಗಿದ್ದರು. ಈ ಎಲ್ಲ ಬೆಳವಣಿಗೆಗಳ ನಡುವೆಯೂ ಡಿಕೆಶಿ ಯಾವುದೇ ರೀತಿಯಲ್ಲೂ ಬೇಸರ ವ್ಯಕ್ತಪಡಿಸಿರಲಿಲ್ಲ. ಇದು ಅವರು ಸದ್ದಿಲ್ಲದೇ ಪರ್ಯಾಯ ಲಿಂಗಾಯತ ನಾಯಕತ್ವವನ್ನು ರೂಪಿಸಲು ಪ್ರಯತ್ನಿಸುತ್ತಿದ್ದಾರೆಯೇ ಎಂದು ಭಾಸವಾಗುತ್ತಿದೆ. 2018 ರ ಚುನಾವಣೆಯಲ್ಲಿ ಲಿಂಗಾಯತರಿಗೆ 43 ಟಿಕೆಟ್ ಗಳನ್ನು ನೀಡಲಾಗಿತ್ತು. ಆದರೆ ಈ ಬಾರಿ 51 ಟಿಕೆಟ್ ಗಳನ್ನು ನೀಡಿದ್ದರು. ಈಗ ಲಕ್ಷ್ಮಿ ಹೆಬ್ಬಾಳ್ಕರ್, ವೀರೇಂದ್ರ ಪಪ್ಪಿ ಮುಂತಾದ ಡಿ ಕೆ ಶಿವಕುಮಾರ್ ಅವರಿಗೆ ನೇರವಾಗಿ ನಿಷ್ಠೆ ಹೊಂದಿರುವ ಲಿಂಗಾಯತರ ಒಂದು ಗುಂಪು ಇದೆ. ಇದು ಪಾಟೀಲ್ ಸಿಟ್ಟಿಗೆ ಕಾರಣ ಎಂದು ಇಬ್ಬರ ಆಪ್ತ ವಲಯಗಳು ಹೇಳುತ್ತವೆ.

**ಖಾತೆ ಕ್ಯಾತೆ ಕಾರಣ?**

ಜಲಸಂಪನ್ಮೂಲ ಖಾತೆಗೆ ಶಿವಕುಮಾರ್ ಮತ್ತು ಪಾಟೀಲ್ ಪಟ್ಟು ಹಿಡಿದಿರುವುದು ಮೂಲ ಕಾರಣ ಎಂದು ವಿಶ್ಲೇಷಿಲಾಗುತ್ತಿದೆ. ಶಿವಕುಮಾರ್ ಅವ–ರಿಗೆ ಈಗ ಲಿಂಗಾಯತ ನಾಯಕ ಎಂ.ಬಿ. ಪಾಟೀಲ್ ಜಲಸಂಪನ್ಮೂಲ ಖಾತೆಯನ್ನೇ ನೀಡಬೇಕು ಎಂದು ಸವಾಲೊಡ್ಡುತ್ತಿದ್ದಾರೆ. ಜಲಸಂಪನ್ಮೂಲ ಖಾತೆಗಾಗಿ ಆರಂಭವಾದ ಆಂತರಿಕ ಯುದ್ಧ ಈಗ ಬಹಿರಂಗಗೊಂಡಿದ್ದು, ದೆಹಲಿಯ ಹೈಕಮಾಂಡ್ ಅಂಗಳಕ್ಕೆ ತಲುಪಿದೆ.

ಮೇಕೆದಾಟು ಯೋಜನೆ ಕೈಗೆತ್ತಿಕೊಂಡು ಹಳೇ ಭಾಗದಲ್ಲಿ ಒಕ್ಕಲಿಗ ನಾಯಕನಾಗಲು ಡಿಕೆಶಿ ಚಿಂತನೆ ನಡೆಸಿದ್ದಾರೆ. ಅತ್ತ ಪಾಟೀಲ್ ಕೂಡ ನೀರಾವರಿ ಇಲಾಖೆ ಮೇಲೆ ಕಣ್ಣಿಟ್ಟಿದ್ದಾರೆ. ಈ ಹಿಂದೆ ಇದೇ ಖಾತೆ ನಿರ್ವಹಿಸಿದ ಅನುಭವವಿದೆ. ಮೇಲಾಗಿ ಉತ್ತರ ಕರ್ನಾಟಕದ ಅನೇಕ ನೀರಾವರಿ ಯೋಜನೆಗಳಿಗೆ ಚುರುಕಿನ ಚಾಲನೆ ನೀಡಿ ಮನೆ ಮಾತಾಗಿದ್ದಾರೆ. ಇದೇ ಕಾರಣಕ್ಕೆ ಪಾಟೀಲ್ ತಮ್ಮ ಸಿಟ್ಟನ್ನು ಈ ಮೂಲಕ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ಸಿಎಂ ಸ್ಥಾನದ ಆಯ್ಕೆಯ ಡಿ ಕೆ ಶಿವಕುಮಾರ್ ಬೇಡಿಕೆ ಇಟ್ಟಿದ್ದ ಎರಡು ಪ್ರಬಲ ಖಾತೆಗಳ ಪೈಕಿ ಇದೂ ಒಂದಾಗಿತ್ತು.

ಉತ್ತರ ಕರ್ನಾಟಕ ಭಾಗದಲ್ಲಿ ನೀರಾವರಿ ಯೋಜನೆಗಳು ಹೆಚ್ಚಿರುವುದರಿಂದ ನನಗೆ ಜಲಸಂಪನ್ಮೂಲ ಖಾತೆ ಬೇಕೇ ಬೇಕು ಎಂದು ನೂತನ ಸಚಿವ ಎಂ.ಬಿ ಪಾಟೀಲ್ ಪಟ್ಟು ಹಿಡಿದಿದ್ದಾರೆ.

ಮೇಕೆದಾಟು ಯೋಜನೆಯನ್ನು ಜಾರಿ ಮಾಡಬೇಕಾದ ಅಗತ್ಯವಿದೆ ಎಂದಿರುವ ನೂತನ ಡಿಸಿಎಂ ಡಿಕೆ ಶಿವಕುಮಾರ್ ಈಗಾಗಲೇ ಮೇಕೆದಾಟು ಪಾದಯಾತ್ರೆಯನ್ನ ನಡೆಸಿದ್ದು, ಮೇಕೆದಾಟು ಯೋಜನೆ ಜಾರಿಗೆ ಪಣ್ಣತೊಟ್ಟಿದ್ದು, ಜಲಸಂಪನ್ಮೂಲ ಖಾತೆ ಮೇಲೆ ಕಣ್ಣಿಟ್ಟಿದ್ದಾರೆ. ಹೀಗಾಗಿ ಉಭಯ ನಾಯಕರ ನಡುವೆ ಜಲಸಂಪನ್ಮೂಕ ಖಾತೆಗಾಗಿ ಶೀತಲ ಸಮರ ಹೆಚ್ಚಾಗಿದೆ ಎನ್ನಲಾಗಿದೆ.

## ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ 6ನೇ ತರಗತಿಯ ಪ್ರವೇಶ ಪತ್ರ ಪಡೆಯಲು ಸೂಚನೆ

ಬೆಳಗಾವಿ: 2023–24ನೇ ಸಾಲಿಗೆ ಬೆಳಗಾವಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಾದ ರಾಮತೀರ್ಥ ನಗರ ಬೆಳಗಾವಿ, ಕಿತ್ತೂರು ತಾಲೂಕಿನ ಹೂಲಿಕಟ್ಟಿ, ಚಿಕ್ಕೋಡಿ ತಾಲೂಕಿನ ಹಿರೇಕೋಡಿ, ಮೂಡಲಗಿ, ರಾಮದುರ್ಗ ತಾಲೂಕಿನ ಸಾಲಹಳ್ಳಿ ಹಾಗೂ ಕಾಗವಾಡ ತಾಲೂಕಿನ ಐನಾಪೂರ ಇಲ್ಲಿ 6ನೇ ತರಗತಿಯ ಪ್ರವೇಶಕ್ಕಾಗಿ ಪ್ರವೇಶ ಪರೀಕ್ಷೆಯನ್ನು ಭಾನುವಾರ ಮೇ.28 2023 ರಂದು ನಿಗದಿಪಡಿಸಿದ್ದು, ಅರ್ಜಿ ಸಲ್ಲಿಸಿದ ಸಂಬಂಧಪಟ್ಟ ವಸತಿ ಶಾಲೆಗಳಿಂದ ಮೇ.23 ರಿಂದ ಮೇ.27 2023 ರೊಳಗಾಗಿ ಪ್ರವೇಶ ಪತ್ರವನ್ನು ಪಡೆಯುವಂತೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಪಾಲಕರು/ಪೋಷಕರಿಗೆ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಸೂಚಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ, ಮೂಡಲಗಿ ತಾಲೂಕಿನ ಹಾಲಿ ಚಾಲ್ತಿಯಲ್ಲಿರುವ 110 ಕೆವಿ ಮುಗಳಖೋಡ, ಕಬ್ಬೂರ, ಸೈದಾಪೂರ, ವಿದ್ಯುತ್ ಮಾರ್ಗದಿಂದ ಹಳ್ಳೂರು ಗ್ರಾಮದಲ್ಲಿ ಹೊಸದಾಗಿ ನಿರ್ಮಿಸಲು ಉದ್ದೇಶಿಸಿರುವ 110/11ಕೆವಿ ವಿದ್ಯುತ್ ಕೇಂದ್ರಕ್ಕೆ ಲೀಲೋ 2.649 ಕಿಮಿ ಲೈನ್ ಮಾರ್ಗವನ್ನು ನಿರ್ಮಿಸಲಾಗಿದೆ.

ಸದರಿ 110 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ಹಳ್ಳೂರ ಹಾಗೂ ಅಕ್ಕಪಕ್ಕದಲ್ಲಿ ಬರುವ ಹಳ್ಳಿಗಳು ಮತ್ತು ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ವಿದ್ಯುತ್ ಪ್ರಸರಣ ಮಾರ್ಗ ಜೂನ್ 07. ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿದ್ಯುತ್ತನ್ನು ಹ–ರಿಬಿಡಲಾಗುವದು ಕಾರಣ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ ಮತ್ತು ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಪ್ರಾಣಾಪಾಯಕವಾಗುವುದು, ಆದಕರಣ ಸಾರ್ವಜನಿಕರು ಮೇಲ್ಕಾಣಿಸಿದವುಗಳನ್ನು ಮಾಡಬಾರದೆಂದು ಎಂದು ತಿಳಿಸಲಾಗಿದೆ.

ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಕಾರ್ಯನಿರ್ವಾಹಕ ಅಭಿಯಂತರು (ವಿ), ಬೃಹತ್ ಕಾಮಗಾರಿ ವಿಭಾಗ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾರ್ಯನಿರ್ವಾಹಕ ಇಂಜಿನೀಯರ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಚ. ಕಿತ್ತೂರು ನ್ಯಾಯಾಲಯದ ಕಟ್ಟಡ ಶಿಲಾನ್ಯಾಸ ಮೇ.26 ರಂದು

ಬೆಳಗಾವಿ: ಜಿಲ್ಲಾ ನ್ಯಾಯಾಂಗ, ಲೋಕೋಪಯೋಗಿ ಇಲಾಖೆ, ಬೆಳಗಾವಿ ಹಾಗೂ ವಕೀಲರ ಸಂಘ, ಚನ್ನಮ್ಮ ಕಿತ್ತೂರು ಇವರ ಸಂಯುಕ್ತ ಆಶ್ರಯದಲ್ಲಿ ಚನ್ನಮ್ಮ ಕಿತ್ತೂರು ನ್ಯಾಯಾಲಯದ ನೂತನ ಕಟ್ಟಡದ ಶಿಲಾನ್ಯಾಸ ಸಮಾರಂಭ ಶುಕ್ರವಾರ (ಮೇ.26 ) ಸಂಜೆ 5:30 ಗಂಟೆಗೆ ನೆರವೇರಲಿದೆ.

ಶೀಲಾನ್ಯಾಸ ಸಮಾರಂಭಕ್ಕೆ ಕರ್ನಾಟಕ ಉಚ್ಚ ನ್ಯಾಯಾಲಯ ಮುಖ್ಯ ನ್ಯಾಯಮೂರ್ತಿಗಳಾದ ಪ್ರಸನ್ನ ಬಿ. ವರಾಳೆ, ಚನ್ನಮ್ಮ ಕಿತ್ತೂರು ನ್ಯಾಯಾಲಯದ ನೂತನ ಕಟ್ಟಡದ ಶಿಲಾನ್ಯಾಸ ನೆರವೇ–ರಿಸಲಿದ್ದಾರೆ, ಬೆಳಗಾವಿ ಜಿಲ್ಲೆಯ ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ಶಿಲಾನ್ಯಾಸ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಸಚಿನ್ ಶಂಕರ್ ಮಗದುಮ್, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಕೆ.ಎಸ್. ಹೇಮಲೇಖಾ, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಅನಿಲ್ ಬಿ. ಕಟ್ಟಿ, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ರಾಮಚಂದ್ರ ಡಿ. ಹುದ್ದಾರ, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ವಿಜಯಕುಮಾರ ಎ. ಪಾಟೀಲ ಅವರು ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಚನ್ನಮ್ಮ ಕಿತ್ತೂರು ಶಾಸಕರಾದ ಬಾಬಾಸಾಹೇಬ ಬಿ.ಪಾಟೀಲ,ಕರ್ನಾಟಕ ಉಚ್ಚ ನ್ಯಾಯಾಲಯದ ಮಹಾವಿಲೇಖನಾಧಿಕಾರಿಗಳಾದ ಕೆ.ಎಸ್. ಭರತಕುಮಾರ, ಕರ್ನಾಟಕ ರಾಜ್ಯ ವಕೀಲರ ಪರಿಷತ್ ಉಪಾಧ್ಯಕ್ಷರಾದ ವಿನಯ ಬಿ. ಮಾಂಗಲೇಕರ, ಕರ್ನಾಟಕ ರಾಜ್ಯ ವಕೀಲರ ಪರಿಷತ್ತು ಸದಸ್ಯರಾದ ಕಲ್ಮೇಶ ಟಿ. ಕಿವಡ ಅವರು ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದಾರೆ, ಎಂದು ಬೆಳಗಾವಿಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮುಸ್ತಫಾ ಹುಸೇನ ಎಸ್.ಎ. ಅವರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಭಾರತ ರತ್ನ ಡಾ. ಬಿ.ಆರ್ ಅಂಬೇಡ್ಕರ ಅವರ ಐತಿಹಾಸಿಕ ಹಾಜರಾತಿಯ ಸ್ಮರಣಾರ್ಥ ಶಿಲಾ ಪ್ರತಿಷ್ಠಾಪನಾ ಸಮಾರಂಭ

ಬೆಳಗಾವಿ: ಚಿಕ್ಕೋಡಿ ಅಧೀನ ನ್ಯಾಯಾಧೀಶರ ನ್ಯಾಯಾಲಯದ ಸಿವಿಲ್ ದಾವೆ ಸಂಖ್ಯೆ 453/1934 ರಲ್ಲಿ ಭಾರತ ರತ್ನ ಡಾ. ಬಿ.ಆರ್ ಅಂಬೇಡ್ಕರ ಅವರ ಐತಿಹಾಸಿಕ ಹಾಜರಾತಿಯ ಸ್ಮರಣಾರ್ಥ ಶಿಲಾ ಪ್ರತಿಷ್ಠಾಪನಾ ಸಮಾರಂಭವು ಮೇ.27 2024 ರಂದು ಮಧ್ಯಾಹ್ನ 1.45 ಗಂಟೆಗೆ ಚಿಕ್ಕೋಡಿಯ ನ್ಯಾಯಾಲಯ ಆವರಣದಲ್ಲಿ ನಡೆಯಲಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಪ್ರಸನ್ನ ಬಿ. ವರಾಳೆ ಅವರು ಶಿಲಾ ಪ್ರತಿಷ್ಠಾಪನೆ ಮಾಡಲಿದ್ದಾರೆ. ಕರ್ನಾಟಕ ಉಚ್ಚ ನ್ಯಾಯಾಲಯದ ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.


ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಸಚಿನ್ ಶಂಕರ್ ಮಗದುಮ್, ಕೆ.ಎಸ್. ಹೇಮಲೇಖಾ, ಅನಿಲ್ ಬಿ. ಕಟ್ಟಿ, ರಾಮಚಂದ್ರ ಹುದ್ದಾರ, ವಿಜಯಕುಮಾರ ಎ. ಪಾಟೀಲ, ಚಂದ್ರಶೇಖರ ಎಂ. ಜೋಶಿ ಇವರು ಅತಿಥಿ ಸ್ಥಾನ ವಹಿಸಲಿದ್ದಾರೆ.

ಮೂಡಲಗಿ ನೂತನ ನ್ಯಾಯಾಲಯ ಹಾಗೂ ನ್ಯಾಯಾಧೀಶರ ವಸತಿ ಗೃಹದ ಉದ್ಘಾಟನಾ ಸಮಾರಂಭ :

ಲೋಕೋಪಯೋಗಿ ಇಲಾಖೆ ಚಿಕ್ಕೋಡಿ ಹಾಗೂ ವಕೀಲರ ಸಂಘ ಮೂಡಲಗಿ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಿಗ್ಗೆ 10.30 ಗಂಟೆಗೆ ಮೂಡಲಗಿ ನ್ಯಾಯಾಲಯದ ನೂತನ ಕಟ್ಟಡ ಹಾಗೂ ನ್ಯಾಯಾಧೀಶರ ವಸತಿ ಗೃಹದ ಉದ್ಘಾಟನಾ ಸಮಾರಂಭ ಜರುಗಲಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಪ್ರಸನ್ನ ಬಿ. ವರಾಳೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕರ್ನಾಟಕ ಉಚ್ಚ ನ್ಯಾಯಾಲಯದ ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

# ಜಾನುವಾರುಗಳ ರಕ್ಷಣೆ ನಮ್ಮೆಲ್ಲರ ಕರ್ತವ್ಯ: ಡಾ. ಮಂಜುನಾಥ ಪಾಳೇಗಾರ



ಬೆಳಗಾವಿ: ಮನುಷ್ಯನಂತೆ ಜಾನುವಾರುಗಳ ರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಜಾನುವಾರಗಳ ರಕ್ಷಣೆಗೆ ಬೇಕಾದ ಅಗತ್ಯ ಸೌಲಭ್ಯಗಳನ್ನು ಸರಿಯಾದ ಸಮಯಕ್ಕೆ ಒದಗಿಸಬೇಕು ಎಂದು ಬೆಂಗಳೂರು ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಅಧ್ಯಕ್ಷರಾದ ಡಾ. ಮಂಜುನಾಥ ಎಸ್ ಪಾಳೇಗಾರ ಅವರು ಹೇಳಿದರು.

ಬೆಳಗಾವಿ ಭಾಗದ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಮತ್ತು ಮುಖ್ಯ ಅಧಿಕಾರಿಗಳು (ಆಡಳಿತ) ಕಾರ್ಯಗಾರದಲ್ಲಿ ಜಾನುವಾರಗಳ ಕೃತಕ ಗರ್ಭಧಾರಣೆ ವಿಸ್ತರಣಾ ಚಟುವಟಿಕೆಗಳು, ಲಸಿಕಾ ಕಾರ್ಯಕ್ರಮ ಹಾಗೂ ಪ್ರಾಣಿ ಕಲ್ಯಾಣ ಮಂಡಳಿಗೆ ಸಂಬಂಧಿಸಿದ ಕಾರ್ಯಕ್ರಮಗಳ ಅನುಷ್ಠಾನ ಕುರಿತು ಗುರುವಾರ (ಮೇ 25) ಪಶುಪಾಲನ ಮತ್ತು ಪಶುವೈದ್ಯಕೀಯ ರೈತರ ತರಬೇತಿ ಕೇಂದ್ರದಲ್ಲಿ ಅವರು ಮಾತನಾಡಿದರು.

ಜಿಲ್ಲಾ ಉಪನಿರ್ದೇಶಕರಿಗೆ ನಿಗದಿಪಡಿಸಿದ ಗುರಿಗಳ ಅನ್ವಯ ವೈಜ್ಞಾನಿಕ ಪಶುಸಂಗೋಪನೆ ತರಬೇತಿಗಾಗಿ ಅಧಿಕಾ–ರಿಗಳನ್ನು ನಿಯೋಜಿಸಬೇಕು. ಅದೇ ರೀತಿಯಲ್ಲಿ ಪಶು ಸಂಗೋಪನೆ ತರಬೇತಿಗಾಗಿ ತಾಂತ್ರಿಕ ಸಿಬ್ಬಂದಿಗಳನ್ನು ಕೂಡ ನಿಯೋಜಿಸಬೇಕು ಅದರಂತೆ ನಿಗದಿಪಡಿಸಿದ ಎಲ್ಲ ಗುರಿಗಳನ್ನು ತಲುಪಲು ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಜಾನುವಾರ ಹಾಗೂ ಒಕ್ಕೂಟ ಕ್ಷೇತ್ರಗಳ ಬಗ್ಗೆ, ಆಹಾರ ನಿಯಂತ್ರಣ, ಕ್ರಿಯಾಯೋಜನೆ ತಯಾರಿಕೆ, ಮಾರ್ಗಸೂಚಿ, ಔಷಧಿಗಳು, ರಾಸಾಯನಿಕ ಪದಾರ್ಥಗಳು ಮತ್ತು ಸಾಮಗ್ರಿಗಳ ಸರಬರಾಜುಗಳ ಕುರಿತು, ಕಟ್ಟಡಗಳ ನಿರ್ವಹಣೆ, ವಿಸ್ತರಣಾ ಘಟಕಗಳ ಬಲಪಡಿಸುವಿಕೆ, ಗ್ರಾಮೀಣ ಪಶುವೈದ್ಯ ಶಾಲೆಗಳನ್ನು ತೆರೆಯುವುದು ಮತ್ತು ಅವುಗಳನ್ನು ತಾಲೂಕು ಮಟ್ಟದ ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೆ ಏರಿಸುವ ಕುರಿತು ನಿರ್ದೇಶನ ನೀಡಿದರು.

ಅದೇ ರೀತಿಯಲ್ಲಿ ಉಪಕರಣಗಳ ನಿರ್ವಹಣೆ, ಪಶು ಸಖಿಯರ ಕಾರ್ಯನಿರ್ವಹಣೆ, ಜಾನುವಾರಗಳ ಲಸಿಕಾ ವೇಳಾಪಟ್ಟಿ, ಹೀಗೆ ಎಲ್ಲ ಅಗತ್ಯ ವಿಷಯಗಳ ಕುರಿತು ಪಶು ವೈದ್ಯಕೀಯ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಬಳಿಕ ಜಾನುವಾರುಗಳ ರಕ್ಷಣೆ, ಜಾನುವಾರುಗಳ ಕೃತಕ ಗರ್ಭಧಾರಣೆ, ಗರ್ಭ ತಪಾಸಣೆ, ಲಸಿಕಾ ಕಾರ್ಯಕ್ರಮಗಳು, ತಾಂತ್ರಿಕ ತಪಾಸಣೆ, ಜಾನುವಾರು ಜಾಗೃತ ಶಿಬಿರ, ವೈಜ್ಞಾನಿಕ ತಾಂತ್ರಿಕತೆ ಪರಿಚಯ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಬಗ್ಗೆ ಬೆಂಗಳೂರು ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಅಧ್ಯಕ್ಷರಾದ ಡಾ. ಮಂಜುನಾಥ. ಎಸ್ ಪಾಳೇಗಾರ ಅವರು ಅಧಿಕಾರಿಗಳಿಗೆ ವಿವರಿಸಿದರು.

ಕಾರ್ಯಗಾರದಲ್ಲಿ ಧಾರವಾಡದ ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಡಾ. ಬಿ ಎಲ್. ಪರಮೇಶ್ವರ ನಾಯಕ, ಬೆಳಗಾವಿಯ ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಡಾ. ರಾಜೀವ ಕೋಲೇರ, ಬಾಗಲಕೋಟೆಯ ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಡಾ. ಶಶಿಧರ್ ನಾಡಗೌಡ, ವಿಜಯಪುರ ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಡಾ. ಅಶೋಕ ಗೊಣಸಗಿ, ಪಶುಪಾಲನ ಮತ್ತು ವೈದ್ಯಕೀಯ ಸೇವಾ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ದುಡಿಯುವ ಕೈಗೆ ಉದ್ಯೋಗ ನೀಡಿ: ಹರ್ಷಲ್ ಭೊಯರ್



ಬೆಳಗಾವಿ: ತಾಲೂಕಿನಲ್ಲಿ ಮಳೆ ಬೇಗನೆ ಪ್ರಾರಂಭವಾಗುವ ಸಂಭವವಿದ್ದು, ಮಾರ್ಕಂಡೇಯ ನದಿಯ ಕಾಮಗಾರಿಯನ್ನು ಸಾಧ್ಯವಾದಷ್ಟು ಪೂರ್ಣಗೊಳಸಲು ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿ ಮಟ್ಟದ ಅಧಿಕಾ–ರಿಗಳು ಪ್ರಯತ್ನ ಮಾಡಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೊಯರ್ ಅವರು ಹೇಳಿದರು.

ತಾಲ್ಲೂಕಿನ ಕಂಗ್ರಾಳಿ ಬಿ.ಕೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಮಾರ್ಕಂಡೇಯ ನದಿ (ಮಿಷನ್ 2.0) ಕಾಮಗಾ–ರಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಿಜಗರ್ಣಿ, ಬೆಳಗುಂದು, ತುರಮುರಿ, ಬೆಕ್ಕಿನಕೇರಿ, ಉಜಗಾಂವ, ಬೆನಕನಹಳ್ಳಿ, ಸುಳಗಾ(ಉ) ಹಿಂಡಲಗಾ ಹಂದಿಗನೂರ, ಅಂಬೇವಾಡಿ, ಅಗಸಗಾ, ಕೇದನೂರ, ಬಂಬರಗಾ, ಕಂಗ್ರಾಳಿ (ಕೆ.ಎಚ್.), ಕಂಗ್ರಾಳಿ (ಬಿ.ಕೆ), ಕಡೋಲಿ, ಕಾಕತಿ ಹಾಗೂ ಹೊನಗಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೂಲಿಕಾರರ ಸಂಖ್ಯೆ ಹೆಚ್ಚಿನ ಪ್ರಮಾಣದಲ್ಲಿ ಇರುವದರಿಂದ, ಎಲ್ಲ ನರೇಗಾ ಕೂಲಿಕಾರ–ರಿಗೆ ಮಾರ್ಕಂಡೇಯ ನದಿಯ ಕಾಮಗಾರಿಯನ್ನು ನೀಡಿ ಎಂದು ತಿಳಿಸಿದರು.

ಕೂಲಿಕಾರರಿಗೆ ಕುಡಿಯುವ ನೀರಿನ ವ್ಯವಸ್ಥೆ, ನೆರಳಿನ ವ್ಯವಸ್ಥೆ ಇತರ ಮೂಲ ಸೌಕರ್ಯಗಳನ್ನು ಕಡ್ಡಾಯವಾಗಿ ನೀಡಬೇಕು. ಕೂಲಿಕಾರರಿಗೆ ಯಾವುದೇ ತೊಂದರೆಂಯಾಗದಂತೆ ನೋಡಿಕೊಳ್ಳಬೇಕು ದುಡಿಯವ ಬಡವರ್ಗದವರಿಗೆ ಉದ್ಯೋಗ ನೀಡಿ. ಯವುದೇ ಕಾರಣಕ್ಕೂ ಕೂಲಿಕಾರ್ಮಿಕರು ಉದ್ಯೋಗ ಖಾತರಿ ಯೋಜನೆಯಿಂದ ದೂರವಿರಬಾರದು ಎಂದು ತಿಳಿಸಿದರು. ಇದೆ ಸಂದರ್ಭದಲ್ಲಿ ನರೇಗಾ ಕಾಯಕ ಬಂದುಗಳಿಗೆ ಮತ್ತು ಕೂಲಿಕಾರ್ಮಿಕರಿಗೆ ಶರ್ಟ್ ಮತ್ತು ಕ್ಯಾಪ್ ಹಾಗೂ ಪ್ರಥಮ ಚಿಕಿತ್ಸೆ ಪಟ್ಟಿಗೆಯನ್ನು ವಿತರಿಸಿದರು.

ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಜೇಶ ದಾನವಾಡಕರ್, ಸಹಾಯಕ ನಿರ್ದೇಶಕರಾದ ರಾಜೇಂದ್ರ ಮೊರಬದ, ಜಿಲ್ಲಾ ಕಾರ್ಯಕ್ರಮಗಳ ಸಂಯೋಜ–ಕ ಬಸವರಾಜ ಎನ್. ಜಿಲ್ಲಾ ಐಇಸಿ ಸಂಯೋಜಕ ಪ್ರಮೋದ ಗೋಡೆಕರ, ತಾಂತ್ರಿಕ ಸಂಂ–ಯೋಜಕ ನಾಗರಾಜ ಯರಗುದ್ದಿ, ತಾಐಇಸಿ ಸಂಯೋಜಕ ರಮೇಶ ಮಾದರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಜಿ.ಐ. ಬರಗಿ, ತಾಂತ್ರಿಕ ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು ಇದ್ದರು.

# ಗ್ಯಾರಂಟಿ ಟಾರ್ಗೆಟ್ ಮಾಡಿದ ಬಿಜೆಪಿಗೆ ಕಾಂಗ್ರೆಸ್ ತಿರುಗೇಟು

ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ವಿಳಂಬವಾಗುತ್ತಿರುವ ಬಗ್ಗೆ ಟೀಕಿಸುತ್ತಿರುವ ಬಿಜೆಪಿ ನಾಯಕ–ರಿಗೆ ರಾಜ್ಯ ಕಾಂಗ್ರೆಸ್ ಘಟಕ ತಿರುಗೇಟು ನೀಡಿದೆ.

ಮೊದಲು ವಿಪಕ್ಷ ನಾಯಕ ಸ್ಥಾನಕ್ಕೆ ಸೂಕ್ತ ವ್ಯಕ್ತಿ ಹುಡುಕಿ. ನಾವು ಕೊಟ್ಟ ಗ್ಯಾರಂಟಿಗಳನ್ನು ಜಾರಿಗೊಳಿಸೋದು ಗ್ಯಾರಂಟಿ. ನಾವು ನಮ್ಮ ಜನರ ಹಿತ ಕಾಪಾಡುವ ಬದ್ಧತೆ ಹೊಂದಿದ್ದೇವೆ. ನಾವು ಘೋಷಿಸಿದ 5 ಗ್ಯಾರಂಟಿಗಳನ್ನು ಜಾರಿ ಮಾಡುತ್ತೇವೆ ಎಂದು ಟ್ವೀಟ್ ಮೂಲಕ ತಿಳಿಸಿದೆ.

ಇದೇ ವೇಳೆ ಬಿಜೆಪಿ ಸೋಲಿನ ವಿಚಾರವಾಗಿ ಕಾಲೆಳೆದಿರುವ ಕಾಂಗ್ರೆಸ್, ಚುನಾವಣೆಯ ಸೋಲಿನ ಹೊಣೆಹೊರುವವರು ಯಾರು? ಎಂದು ಪ್ರಶ್ನಿಸಿದೆ.

ಚುನಾವಣೆಯಲ್ಲಿ ಹೀನಾಯವಾಗಿ ಸೋಲಿನ ಹೊಣೆ ಹೊರುವವರು, ಹೊಣೆ ಹೊತ್ತು ರಾಜೀನಾಮೆ ನೀಡುವವರು ಯಾರೂ ಇಲ್ಲವೇ ಬಿಜೆಪಿಯಲ್ಲಿ? ಸೋಲಿನ ಹೊಣೆ ಯಾರದ್ದು? ಅಮಿತ್ ಶಾ ಅವರದ್ದೋ? ಬೊಮ್ಮಾಯಿ ಅವರದ್ದೋ/ ಮೋದಿಯವರದ್ದೋ? ನಳೀನ್ ಕಟೀಲ್ ಅವರದ್ದೋ? ಎಂದು ಪ್ರಶ್ನಿಸಿದೆ.

# ಜಮೀನು ವಿವಾದ: ಎರಡು ಕುಟುಂಬಗಳ ಮಾರಾಮಾರಿ



ಬೈಲಹೊಂಗಲ: ಎರಡು ಕುಟುಂಬಗಳ ಮಧ್ಯೆ ಜಮೀನು ವಿವಾದದ ಹಿನ್ನೆಲೆಯಲ್ಲಿ ಮಾರಾಮಾರಿವಾದ ಘಟನೆ ತಾಲೂಕಿನ ಭಾವಿಹಾಳ ಗ್ರಾಮದಲ್ಲಿ ಮೇ 23 ರಂದು ನಡೆದಿತ್ತು.

ಗ್ರಾಮದ ಮಹಾರುದ್ರಪ್ಪ ಬಸವಂತಪ್ಪ ಕುಂಬಾರ (45), ರಮೇಶ ಶಿವಪ್ಪ ಕುಂಬಾರ (23), ಶಿವಾನಂದ ಮಹಾರುದ್ರಪ್ಪ ಕುಂಬಾರ (24) ಲಕ್ಷ್ಮೀ ಮಹಾರುದ್ರಪ್ಪ ಕುಂಬಾರ (37) ಇವರು ಗಾಯಗೊಂಡಿದ್ದು ಚಿಕಿತ್ಸೆಗಾಗಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ.

ಆರೋಪಿತರು 6 ಜನ ಸೇ–ರಿಕೊಂಡು ಏಕಾಏಕಿ ಮನೆಗೆ ನುಗ್ಗಿ ಬಡಿಗೆ. ಕುಡಗೋಲಿನಿಂದ ತಲೆಗೆ, ಭುಜಕ್ಕೆ ಹೊಡೆದು ದಾಳಿ ಮಾಡಿ ಮಾರಣಾಂತಿಕವಾಗಿ ಹಲ್ಲೆಮಾಡಿ ಪರಾರಿಯಾಗಿ ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ದಾಖಲಾಗಿದ್ದಾರೆ. ಈ ಎರಡು ಕುಟುಂಬಗಳ ಮಧ್ಯ ಕಟ್ಟಿಗೆಗಳಿಂದ ಪರಸ್ಪರ ಹೊಡೆದಾಡಿಕೊಂಡಿರುವ ದೃಶ್ಯ ಸಾಮಾಜಿಕ ಜಾಲ ತಾಣದಲ್ಲಿ ವಿಡಿಯೊ ಹರಿದಾಡುತ್ತಿದೆ.

ಆಸ್ತಿ ವಿವಾದ ಕುರಿತು ನಮ್ಮ ಕುಟುಂಬದ ಮೇಲೆ ಮಾರಣಾಂತಿಕ ಹಲ್ಲೆಯಾಗಿದ್ದು ಅವರಿಂದ ನಮಗೆ ಜೀವ ಬೆದರಿಕೆ ಇದ್ದು ನಮಗೆ ಪೊಲೀಸ ರಕ್ಷಣೆ ಒದಗಿಸಬೇಕೆಂದು ಪಬ್ಲಿಕ ನೆಕ್ಸ್ಟ್‌ಗೆ ಮನವಿ ಮಾಡಿದರು.

ಘಟನೆ ಹಿನ್ನಲೆ– ಮಹಾರುದ್ರಪ್ಪ ಕುಂಬಾರ ಹಾಗೂ ಶಂಕರೆಪ್ಪ ಕುಂಬಾರ ಕುಟುಂಬಗಳ ಮಧ್ಯೆ ಜಮೀನು ವಿವಾದವಿತ್ತು. ಜಮೀನಿನಲ್ಲಿ ಬೆಳೆದಿದ್ದ ಸಾಗುವಾನಿ ಮರಗಳನ್ನು ಕಡಿದ ಕುರಿತು ವಿವಾದ ಉಂಟಾಗಿತ್ತು.

ನ್ಯಾಯಲಯದ ತೀರ್ಪ ಬಂದ ನಂತರ ನಿಮ್ಮ ಪಾಲಿನ ಗಿಡಗಳನ್ನು ಕಡಿಯಬೇಕು ಎಂದು ವಾದ ವಿವಾದ ನಡೆದು ಜಗಳವಾಗಿ ಮೇ. 2 ರಂದು ಬೈಲಹೊಂಗಲ ಪೊಲೀಸ್ ಠಾಣೆಗೆ ದೂರುದಾಖಲಾಗಿತ್ತು. ಕಡಿದ ಸಾಗುವಾನಿ ಮರಗಳನ್ನು ಒಯ್ಯಲು ಬಂದಾಗ ಈ ಘಟನೆ ನಡೆಯಿತು ಎನ್ನಲಾಗಿದೆ.

ಎರಡು ಕುಟುಂಬಗಳ ಮಧ್ಯೆ ತೀವ್ರ ವಾಗ್ವಾದ, ಹೊಡೆದಾಟ ನಡೆದಿದೆ.ಈ ಕು–ರಿತು ಶಂಕರೆಪ್ಪ ಕುಂಬಾರ ಇವರು ನ್ಯಾಯಾಲಯದ ಮೊರೆ ಹೋಗಿದ್ದರು. ಬೈಲಹೊಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# “ಗ್ರಾಮ ಆರೋಗ್ಯ” ಅಭಿಯಾನಕ್ಕೆ ಚಾಲನೆ



ಬೈಲಹೊಂಗಲ: ಕೂಲಿಕಾರರ ಆರೋಗ್ಯದ ಹಿತದೃಷ್ಟಿಯಿಂದ ತಾಲೂಕಿನಾದ್ಯಾಂತ “ಗ್ರಾಮ ಆರೋಗ್ಯ” ಅಭಿಯಾನಕ್ಕೆ ಚಾಲನೆ ನೀಡಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಾಪಂ.ಸಹಾಯಕ ನಿರ್ದೇಶಕ ವಿಜಯಕುಮಾರ ಪಾಟೀಲ ಹೇಳಿದರು.

ಅವರು ತಾಲೂಕಿನ ಬೈಲವಾಡ ಗ್ರಾಮದಲ್ಲಿ ನರೇಗಾ ಯೋಜನೆಯಡಿ ಕಾಮಗಾರಿ ಸ್ಥಳದಲ್ಲಿರುವ ಕೂಲಿ ಕಾರ್ಮಿಕರ ಗ್ರಾಮ ಆರೋಗ್ಯಕ್ಕೆ ಚಾಲನೆ ನೀಡಿ ಮಾತನಾಡಿ, ಈ ಅಭಿಯಾನ ಮೇ–22 ರಿಂದ ಜೂನ 22 ರವರೆಗೆ ತಾಲೂಕಿನ 34 ಗ್ರಾಮ ಪಂಚಾಯತ ಮತ್ತು ಎಲ್ಲಾ ಗ್ರಾಮಗಳ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕ್ರೀಯಾ ಶೀಲ ಕೂಲಿಕಾರ–ರಿಗೆ ಹಾಗೂ ಗ್ರಾಮಸ್ಥರಿಗೆ ಗ್ರಾಮ ಆರೋಗ್ಯ ಅಭಿಯಾನದಡಿಯಲ್ಲಿ ತಪಾಸಣಾ ಕಾರ್ಯಕ್ರಮ ಆಯೋಜಿಸಲಾಗಿದ್ದು ಜನತೆ ಇದಕ್ಕೆ ಸಹಕ–ರಿಸಬೇಕು ಎಂದರು.

ಪಿಡಿಓ ಶಿವಲೀಲಾ ಯರಗಟ್ಟಿ, ತಾಪಂ ಐಇಸಿ ಸಂಯೋಜಕ ಎಸ್ ವ್ಹಿ ಹಿರೇಮಠ, ಗ್ರಾಪಂ ಕಾರ್ಯದರ್ಶಿ ಮಲ್ಲನಗೌಡ ಕೊರಿ, ಆರೋಗ್ಯ ಇಲಾಖೆಯ ಸಿಬ್ಬಂದಿ ಡಾ.ಪವಿತ್ರಾ. ಸುರೇಖಾ ಬಡ್ಲಿ. ಗ್ರಾಮ ಕಾಯಕ ಮಿತ್ರ ಶಿವಲಿಂಗವ್ವ ಸೋಮಪ್ಪನವರ, ಎಸ್ ಪಿ ಹಿರೇಮಠ, ಬಿ ಜಿ ಮದ್ನಳ್ಳಿ, ಬಿ ಆರ್ ಗಿರೆಪ್ಪಗೊಳ ಹಾಗೂ ಕಾಯಕ ಬಂಧು ಸಂಗಪ್ಪ ಸೋಲಬಣ್ಣವರ, ಯಲ್ಲನಗೌಡ ಗಿರೇಪ್ಪಗೋಳ, ಸಂತೋಷ್ ಗಿರೆಪ್ಪಗೋಳ, ರಮೇಶ ಗಾಡದ ಮತ್ತು ನರೇಗಾ ಕೂಲಿಕಾರರು ಇದ್ದರು.

# ನಾಳೆ ಬೆಲ್ಲದ ಬಾಗೇವಾಡಿಯಲ್ಲಿ ಬೃಹತ್ ಉದ್ಯೋಗ ಮೇಳ



ಹುಕ್ಕೇರಿ : ತಾಲೂಕಿನ ಬೆಲ್ಲದ ಬಾಗೇವಾಡಿಯಲ್ಲಿ ಮೇ. 27 ರಂದು ಬೆಳಗ್ಗೆ 10 ಕ್ಕೆ ಐಟಿಐ ವಿದ್ಯಾರ್ಥಿಗಳಿಗೆ ಬೃಹತ್ ಉದ್ಯೋಗ ಮೇಳ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ, ಅರ್ಬನ್ ಬ್ಯಾಂಕ್ ಅಧ್ಯಕ್ಷ ಪವನ ಕತ್ತಿ ಹೇಳಿದರು.

ಪಟ್ಟಣದ ಪಿಎಲ್‌ಡಿ ಬ್ಯಾಂಕ್‌ನಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಮೊದಲ ಬಾರಿಗೆ ಆಯೋಜಿಸಿದ ಈ ಭವ್ಯ ಉದ್ಯೋಗ ಮೇಳ ಯಶಸ್ಸಿಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ಗ್ಲೋಬಲ್ ಎಚ್‌ಆರ್ ಕನ್ಸಲ್ಟನ್ಸಿ ಸರ್ವಿಸಿಸ್ ಮತ್ತು ವಿ.ಎಂ.ಕತ್ತಿ ಪ್ರೈ ಐಟಿಐ ಸಹಭಾಗಿ–ತ್ವದಲ್ಲಿ ನಡೆಯಲಿರುವ ಈ ಉದ್ಯೋಗ ಮೇಳದಲ್ಲಿ ಸುಮಾರು 10 ಕ್ಕೂ ಹೆಚ್ಚು ವಿವಿಧ ಕಂಪನಿಗಳು ಭಾಗವಹಿಸಲಿವೆ. 2000 ಸಾವಿರ ವಿವಿಧ ಹುದ್ದೆಗಳಿಗೆ ಈ ಕ್ಯಾಂಪಸ್ ಸಂದರ್ಶನ ನಡೆಯಲಿದ್ದು ತಾಲೂಕಿನ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗಿದೆ. ಜಿಲ್ಲೆಯ ನಾನಾ ಕಡೆಗಳಿಂದ ಅಭ್ಯರ್ಥಿಗಳು ಭಾಗವಹಿಸುವ ನಿರೀಕ್ಷೆಯಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಯೋಗ್ಯ ವೇತನ ಸಿಗಲಿದೆ ಎಂದು ಅವರು ಹೇಳಿದರು.

ಈ ಉದ್ಯೋಗ ಮೇಳದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಮತ್ತು ಡಿಪ್ಲೋಮಾ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳು ಈ ಮೇಳದ ಪ್ರಯೋಜನ ಪಡೆಯಬಹುದು. ನಿರುದ್ಯೋಗ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ ಈ ಮೇಳ ಆಯೋಜಿಸಲಾಗಿದ್ದು ತಾಲೂಕಿನ ಯುವಕರು ಪ್ರಯೋಜನ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಮುಖಂಡರಾದ ರಮೇಶ ಕುಲಕರ್ಣಿ, ಪುಟ್ಟು ಖಾಡೆ, ಮಯೂರ ಗಸ್ತಿ, ಪ್ರಾಚಾರ್ಯರಾದ ಎಸ್.ಎಂ.ಭಂಗಿ, ವಿ.ಡಿ.ಥೋರೊ ಮತ್ತಿತರರು ಉಪಸ್ಥಿತರಿದ್ದರು.

## 2023–24ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಪೂರ್ವ ಸಿದ್ಧತೆ ಸಭೆ

# ಶಾಲೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ನಿರಂತರ ಸಹಕಾರ: ಜಿ.ಪಂ ಸಿಇಓ ಹರ್ಷಲ್ ಭೋಯರ್




ಬೆಳಗಾವಿ: ಪ್ರಸಕ್ತ ವರ್ಷದ ಶಾಲಾ ಪ್ರಾರಂಭೋತ್ಸವ ಅದ್ದೂರಿ ಹಾಗೂ ಆಕರ್ಷಣೀಯವಾಗಿ ನೆರವೇರಿಸಬೇಕು. ಮಕ್ಕಳಲ್ಲಿ ಶಾಲೆ ಪ್ರಾರಂಭದ ದಿನದ ಉತ್ಸಾಹ ವರ್ಷವಿಡೀ ಇರುವಂತೆ ಶಾಲಾ ಪರಿಸರ ನಿರ್ಮಾಣವಾಗಬೇಕು. ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಜಿಲ್ಲಾ ಪಂಚಾಯತ್ ವತಿಯಿಂದ ನಿರಂತರ ಸಹಕಾರ ನೀಡಲಾಗುವದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ (ಮೇ.25) ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ 2023–24 ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವದ ಪೂರ್ವ ಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಂತ್ರಜ್ಞಾನ ಬಳಕೆ ಮಾಡಿಕೊಂಡು ಶಿಕ್ಷಕರು ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಬೇಕು. ಶಾಲೆಯಲ್ಲಿ ಪಾಠಬೋಧನೆ ಪ್ರಯೋಗಾಧಾ–ರಿತವಾಗಿರಬೇಕು. ಪಠ್ಯಪುಸ್ತಕ, ಸಮವಸ್ತ್ರ, ಶೂ–ಸಾಕ್ಸ್ ಹಾಗೂ ಇಲಾಖೆಯ ಪ್ರೋತ್ಸಾಹದಾಯಕ ಯೋಜನೆಗಳು ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ವಿತರಣೆಯಾಗಬೇಕು ಎಂದು ಜಿ ಸೂಚನೆ ನೀಡಿದರು.

ಅದೇ ರೀತಿಯಲ್ಲಿ ಶಾಲಾ ಪ್ರಾರಂಭದ ಪೂರ್ವಭಾವಿ ಸಿದ್ಧತೆಗಳ ಬಗ್ಗೆ ಅಗತ್ಯ ಮಾರ್ಗದರ್ಶನ ಮಾಡಿ ಶೈಕ್ಷಣಿಕ ಮಾರ್ಗಸೂಚಿಯನ್ವಯ ಕರ್ತವ್ಯ ನಿರ್ವಹಿಸಲು ಜಿ ಪಂ ಸಿಇಓ ಹರ್ಷಲ್ ಬೋಯರ್ ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ, ಬೆಳಗಾವಿ (ದ) ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಉಪನಿರ್ದೇಶಕರು, ಡಯಟ್, ಪ್ರಾಚಾರ್ಯರು, ಶಿಕ್ಷಣಾಧಿಕಾ–ರಿಗಳು, ಜಿಲ್ಲಾ ಯೋಜನಾ ಉಪಸಮನ್ವಯಾಧಿಕಾರಿಗಳು, ಅಕ್ಷರದಾಸೋಹ ಶಿಕ್ಷಣಾಧಿಕಾ–ರಿಗಳು, ಎರಡೂ ಜಿಲ್ಲೆಗಳ ಎಲ್ಲ ವಲಯಗಳ ಕ್ಷೇತ್ರ ಶಿಕ್ಷಣಾಧಿಕಾ–ರಿಗಳು, ಕ್ಷೇತ್ರ ಸಮನ್ವಯಾಧಿಕಾ–ರಿಗಳು, ಅಕ್ಷರ ದಾಸೋಹ ಸಹಾಯಕ ನಿರ್ದೇಶಕರು, ಸಹಾಯಕ ಯೋಜನಾ ಸಮನ್ವಯಾಧಿಕಾರಿಗಳು ಹಾಗೂ ಬೆಳಗಾವಿ(ದ) ಶೈಕ್ಷಣಿಕ ಜಿಲ್ಲೆಯ ಎಲ್ಲ ವಲಯಗಳ ಇ.ಸಿ.ಓಗಳು, ಬಿಆರ್‌ಪಿಗಳು, ಸಿಆರ್‌ಪಿಗಳು ಹಾಜರಿದ್ದರು. ಸಹಾಯಕ ಯೋಜನಾ ಸಮನ್ವಯಾಧಿಕಾರಿಗಳಾದ ಆರ್ಜಿ ಮೆಳವಂಕಿ ಇವರು ನಿರೂಪಿಸಿದರು. ಶಿಕ್ಷಣ ಇಲಾಖೆಯ ಅಧಿಕಾರಿ ಬಸವರಾಜ ನಾಲತವಾಡ ಅವರು ಸಭೆಯಲ್ಲಿ ಉಪಸ್ಥಿತರಿದ್ದರು.

# ಬೆಳಗಾವಿಯಲ್ಲಿ ನವೀಕೃತ ಹರ್ಷಾ ಹೊಟೇಲ್ ಲೋಕಾರ್ಪಣೆ

ಬೆಳಗಾವಿ: ಪ್ರತಿ ನಿತ್ಯ ಸುಮಾರು 200 ಕೋಟಿರೂ. ವ್ಯವಹಾರ ನಡೆಸುತ್ತಿರುವ ಹೊಟೇಲ್ ಉದ್ಯಮದೇಶದ ಆರ್ಥಿಕತೆಗೂ ಗಮನಾರ್ಹವಾದ ಕೊಡುಗೆ ನೀಡುತ್ತಿದೆ. ಲಕ್ಷಾಂತರ ಜನರಿಗೆ ಹೊಟೇಲ್ಉದ್ಯಮ ಬದುಕನ್ನು ನೀಡುತ್ತಿದೆ. ಹರ್ಷಾ ಹೊಟೇಲ್ ನವೀಕರಣಅತ್ಯಂತ ಸೌಂದರ್ಯಭರಿತವಾಗಿದೆ. ಇದು ಗ್ರಾಹಕರ ಅಚ್ಚುಮೆಚ್ಚಿನ ಉಪಹಾರ ಗೃಹವಾಗಲಿದೆ. ಗ್ರಾಹಕರ ಹಿತರಕ್ಷಣೆಯೇ ಒಂದು ಉದ್ಯಮದ ಯಶಸ್ಸು ಎಂದು ಉತ್ತರಕ್ಷೇತ್ರದ ಮಾಜಿ ಶಾಸಕ ಫಿರೋಜ ಸೇಠ ಹೇಳಿದರು.

ಇಲ್ಲಿಯ ಆಟೋ ನಗರದಲ್ಲಿ ನವೀಕರಣ ಗೊಂಡಿರುವ ಶುದ್ಧ ಶಾಕಾಹಾರಿ ಹರ್ಷಾರೆಸ್ಟೊರೆಂಟ್ಅನ್ನುಗುರುವಾರ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಬೆಳೆಯುತ್ತಿರುವ ಬೆಳಗಾವಿಗೆ ಪೂರಕವಾಗಿ ಹೊಟೇಲ್ ಉದ್ಯಮವೂ ಬೆಳೆಯಬೇಕು. ಬೆಳಗಾವಿ ಎಲ್ಲಾರೀತಿಯಲ್ಲೂ ಪ್ರಮುಖ ವಾಣಿಜ್ಯ ಮತ್ತುಔದ್ಯಮಿಕಕ್ಷೇತ್ರವಾಗಿದೆ. ಪ್ರತಿನಿತ್ಯ ಬಂದು ಹೋಗುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಅವರಿಗೆ ಸರಿಯಾದ ಆತಿಥ್ಯ ಹೊಟೇಲ್ ಉದ್ಯಮ ನೀಡುವುದರಿಂದ ಬೆಳಗಾವಿ ಇನ್ನಷ್ಟು ಎತ್ತರಕ್ಕೆ ಬೆಳೆಯುತ್ತದೆ ಎಂದರು.

ಹರ್ಷಾ ಹೊಟೇಲ್ ಮಾಲಿಕರಾದ ಸುರೇಶ ನಾಯಿರಿ ಅವರು ಈಗಾಗಲೇ ಮೂರು ಹೊಟೇಲ್ ಹೊಂದಿದ್ದು, ಪ್ರತಿ ಹೊಟೇಲಿನಲ್ಲಿ ಕೂಡಗ್ರಾಹಕರ ಆರೋಗ್ಯದ ಹಿತದೃಷ್ಟಿಯನ್ನು ಇಟ್ಟುಕೊಂಡು ಅವರ ಅಭಿರುಚಿಗೆ ತಕ್ಕಂತೆ ಶುಚಿ – ರುಚಿಯ ಕಡೆಗೆ ಹೆಚ್ಚು ಗಮನ ಹ–ರಿಸುತ್ತ ಬಂದಿದ್ದಾರೆ. ಹಾಗಾಗಿ ಸುರೇಶ್ಅವರು ಹೊಟೇಲ್ ನಡೆಸುತ್ತಿರುವ ಶೈಲಿ ಎಲ್ಲರಿಗೂ ಮಾದರಿಯಾಗಿದೆಎಂದು ಹೇಳಿದರು.

ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಬಹುತೇಕ ಉದ್ಯಮಗಳು ಸ್ವಾರ್ಥದಿಂದ ಕೂಡಿದೆ. ಹೊಟೇಲ್ ಉದ್ಯಮ ಸ್ವಾರ್ಥ ಮತ್ತು ನಿಸ್ವಾರ್ಥದ ಸಮ್ಮಿಶ್ರಣವಾಗಿವೆ. ಇಲ್ಲಿ ಗಳಿಕೆಯ



ಜೊತೆಗೆ ಸೇವೆಯೂ ಅಡಗಿದೆ. ಹಸಿದು ಬಂದವರಿಗೆ ಅನ್ನವನ್ನು ನೀಡುವುದು ಶ್ರೇಷ್ಠ ಕಾಯಕ.

ಶುದ್ಧಆಹಾರ ಸೇವನೆಯಿಂದ ದೇಹ ಮತ್ತು ಮನಸ್ಸುಕೂಡ ಶುದ್ಧವಾಗಿರುತ್ತದೆ ಎಂದರು.

ಕಾರಂಜಿ ಮಠದ ಶ್ರೀ ಗುರುಸಿದ್ಧ ಸ್ವಾಮೀಜಿ ಮಾತನಾಡಿ, ಉದ್ಯಮಿ ಸುರೇಶ ನಾಯಿ–ರಿಅವರದು ಸಾತ್ವಿಕ ವ್ಯಕ್ತಿತ್ವ. ಹಣ ಗಳಿಕೆಯ ಜೊತೆಗೆ ಗ್ರಾಹಕರ ಆರೋಗ್ಯ ಅವರಿಗೆ ಮುಖ್ಯಎಂದು ಭಾವಿಸಿದವರು. ನೈರ್ಮಲ್ಯಕ್ಕೆ ಹೆಚ್ಚು ಒತ್ತುಕೊಡುತ್ತಾರೆ.

ಹಲವು ವರ್ಷಗಳಿಂದ ಈ ಉದ್ಯಮ ನಡೆಸಿಕೊಂಡು ಬಂದಿರುವ ಸುರೇಶಗ್ರಾಹಕರ ಹಿತದೃಷ್ಟಿಯನ್ನು ಕಾಯ್ದು ಕೊಂಡಿದ್ದಾರೆ. ಕಾಯಕವೇಅವರ ಮೂಲ ಮಂತ್ರವಾಗಿಟ್ಟು ಕೊಂಡಿದ್ದಾರೆ. ಕಾಯಕದಿಂದಲೇ ಇಷ್ಟು ಎತ್ತರಕ್ಕೆ ಏರಿದ್ದಾರೆ. ಹೊಟೇಲ್ ಉದ್ಯಮಕ್ಕೆ ಬರುವವರಿಗೆ ಮಾದರಿಯಾಗಿ ನಿಂತಿದ್ದಾರೆ ಎಂದು ಸ್ವಾಮೀಜಿ ನುಡಿದರು.

ಹೊಟೇಲ್ ಉದ್ಯಮಿ ವಿಠ್ಠಲ ಹೆಗಡೆ ಮಾತನಾಡಿ, ಹೊಟೇಲ್ ಉದ್ಯಮ ತುಂಬಾ ಸವಾಲಿನದು. ಅಲ್ಲಿ ಸ್ಥಿರವಾಗಿ ನೆಲೆ ನಿಂತವರು ಮಾತ್ರ ಸಾಧಕರಾಗುತ್ತಾರೆ. ಸುರೇಶ್ಅವರು ಕಳೆದ ನಲವತ್ತು ವರ್ಷಗಳಿಂದ ಉದ್ಯಮದಲ್ಲಿ ಇದ್ದವರು. ಅನೇಕ ಏಳು–ಬೀಳುಗಳನ್ನು ಕಂಡವರು. ಯಾವುದಕ್ಕೂ ಹಿಂಜರಿಯ ದೇತನ್ನ ಪರಿಶ್ರಮ ಮತ್ತು ಹೋರಾಟದ ಮೂಲಕವೇ ಉತ್ತರ ಕೊಟ್ಟವರು.

ಇಪ್ಪತ್ತು ವರ್ಷಗಳ ಕೆಳಗೆ ನಾನು ಇದೇ ಹೊಟೇಲ್ಉದ್ಘಾಟನೆ ಮಾಡಿದೆ. ಇಂದು ಈ ಹೊಟೇಲಿನ ನವೀಕರಣವು ಬೆಳಗಾವಿ ಹೊಟೇಲ್ ಗಳಿಗೆ ಮುಕುಟವಾಗಿದೆ. ಅಷ್ಟು ಸುಂದರವಾಗಿ ನವೀಕರಿಸಲಾಗಿದೆ. ಪರಿಶ್ರಮ ಜೀವಿಯಾದ ಸುರೇಶ್ಅವರು ಈಗ ಬೆಳಗಾವಿ ಹೊಟೇಲ್ ಉದ್ಯಮದಲ್ಲಿ ನೆನೆಯತಕ್ಕ ಉದ್ಯಮಿಯಾಗಿ, ಎಲ್ಲರಿಗೂ ಮಾದರಿಯಾಗಿ ಬೆಳೆದಿದ್ದಾರೆ. ಒಂದು ನಗರದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಹೊಟೇಲ್ಉದ್ಯಮ ಪ್ರಮುಖ ಪಾತ್ರವಹಿಸುತ್ತದೆ. ಸರ್ಕಾರ ಹೊಟೇಲ್ ಉದ್ಯಮದ ಉನ್ನತೀಕರಣಕ್ಕೆ ಹೆಚ್ಚು ಗಮನ ಕೊಡಬೇಕುಎಂದರು.

ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಕಟ್ಟಡದ ಮಾಲೀಕರಾದಎನ್. ಎಸ್. ಚೌಗುಲೆ, ರಾಮತೀರ್ಥ ನಗರದ ನಗರ ಸೇವಕರಾದ ಹನಮಂತ ಕೊಂಗಾಲಿ, ಬೆಳಗಾವಿ ಹೊಟೇಲ್ ಸಂಘದಅಧ್ಯಕ್ಷರ ಶ್ರೀ ಅಜಯ್ ಪೈ, ಹರ್ಷಾ ಹೊಟೇಲ್ ವಿನ್ಯಾಸಕಆನಂದರಾಯಕರ್, ಕೆಐಎಡಿಬಿ ಅಧ್ಯಕ್ಷ ಸುರೇಶ್ಯಾದವ, ನಿವೃತ್ತ ಅರಣ್ಯಾಧಿಕಾ–ರಿಗಳಾದ ಕೆ. ಸಂಜೀವ ನಾಯಿರಿ, ಮಾಜಿ ಮೇಯರ್ಎನ್.ಬಿ. ನಿರ್ವಾಣಿಇತರರುಇದ್ದರು. ಹರ್ಷಾರೆಸ್ಟೊರೆಂಟ್ ಮಾಲೀಕ ಸುರೇಶ ನಾಯಿರಿ ಸ್ವಾಗತಿಸಿದರು. ಡಾ. ನಾರಾಯಣ ನಾಯ್ಕ ನಿರೂಪಿಸಿದರು.

## 27ರಂದು ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 27.05.2023 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 05.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ ಮೊದಲನೇಯ ತ್ರೈಮಾಸಿಕ ನಿರ್ವಹಣೆ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ. ಉಚಗಾಂವ ಉಪಕೇಂದ್ರದಿಂದ ವಿತರಣೆಯಾಗುವ ಬಿಜಗರ್ಣಿ, ಬೋಕಮೂರ, ಕವಳೇವಾಡಿ, ಬೆಳವಟ್ಟಿ, ಬಾಕನೂರ, ಬೆಳಗುಂದಿ, ಸೋನೋಲಿ, ಎಳೆಬೈಲ, ರಾಕಸಕೊಪ್ಪ, ಕುದ್ರೇಮನಿ, ಕಲ್ಲೇಹೋಳ, ಬೆಳಗುಂದಿ ಇಂಡಸ್ಟ್ರೀಯಲ್ ಏರಿಯಾ, ಉಚಗಾಂವ, ಬಸುರ್ತೆ, ಬೆಕ್ಕಿನಕೇರಿ, ಸುಳಗಾ, ತುರಮುರಿ, ಕೋಣೇವಾಡಿ, ಬಾಚಿ, ಬೆನಕನಹಳ್ಳಿ, ಸಾವಗಾಂವ, ಮಂಡೋಳಿ, ಹಂಗರಗಾ, ಅಂಗಡಿ ಕಾಲೇಜ್, ಗಣೇಶಪೂರ, ಮಹಾಲಕ್ಷ್ಮೀ ನಗರ, ಆರ್ಮಿ ಕಾಲನಿ, ಕೆ.ಎಚ್.ಬಿ. ಲೇಔಟ್, ಬೆನಕನಹಳ್ಳಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್ಸೆಟ್ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ ಹಾಗೂ

ದಿನಾಂಕ 27.05.2023 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 05.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಉಚಗಾಂವ ಉಪಕೇಂದ್ರದಲ್ಲಿ ಮೊದಲನೇಯ ತ್ರೈಮಾಸಿಕ ನಿರ್ವಹಣೆ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 33 ಕೆ.ವ್ಹಿ. ಹಿಂಡಲಗಾ ಉಪಕೇಂದ್ರದಿಂದ ವಿತರಣೆಯಾಗುವ ಹಿಂಡಲಗಾ ಪಂಪ್ಹೌಸ್, ಗಣೇಶಪೂರ, ಹಿಂಡಲಗಾ, ಮನ್ನೂರ, ಸರಸ್ವತಿ ನಗರ, ಲಕ್ಷ್ಮೀ ನಗರ, ವಿಜಯ ನಗರ, ಡಿಫೆನ್ಸ್ ಕಾಲನಿ, ಕ್ರಾಂತಿ ನಗರ, ಮಾಸ್ತಿ ನಗರ, ಶಿವಂ ನಗರ, ಗೋಜಗಾ ಹಾಗೂ ಅಂಬೇವಾಡಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್ಸೆಟ್ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

## ಜನ, ಜಾನುವಾರುಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮ: ಶಾಸಕ ನಿಖಿಲ್ ಕತ್ತಿ




ಹುಕ್ಕೇರಿ : ಮಳೆಗಾಲದಲ್ಲಿ ಸಂಭವನೀಯ ಅಪಾಯ ತಪ್ಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಬಿತ್ತನೆಗೆ ಅಗತ್ಯ ಬೀಜ ಮತ್ತು ರಸಗೊಬ್ಬರ ದಾಸ್ತಾನು ಮಾಡಿಟ್ಟುಕೊಳ್ಳಬೇಕು. ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ ಸಮರ್ಪಕವಾಗಿ ಪೂರೈಸಬೇಕು ಎಂದು ಶಾಸಕ ನಿಖಿಲ್ ಕತ್ತಿ ಹೇಳಿದರು.

ಪಟ್ಟಣದ ತಾಪಂ ಸಭಾಭವನದಲ್ಲಿ ಗುರುವಾರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜನ ಹಾಗೂ ಜಾನುವಾರುಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಎಲಿಮುನ್ನೋಳಿ, ಹಿಡಕಲ್ ಡ್ಯಾಮ್, ಬೆಲ್ಲದ ಬಾಗೇವಾಡಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ, ಹುಕ್ಕೇರಿಯಲ್ಲಿ ತಾಯಿ–ಮಕ್ಕಳ ಆಸ್ಪತ್ರೆ ಆರಂಭಕ್ಕೆ ಪ್ರಸ್ತಾವನೆ ಸಿದ್ಧಪಡಿಸಿಕೊಳ್ಳಬೇಕು. ಅಪಾಯಕಾರಿ ಮತ್ತು ಶಿಥಿಲಾವಸ್ಥೆ ಅಂಗನವಾಡಿ, ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸಬೇಕು. ಜಾನುವಾರುಗಳಿಗೆ ನೀರು ಮತ್ತು ಮೇವು ಪೂರೈಕೆಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅಗತ್ಯವಿದ್ದಲ್ಲಿ ಗೋಶಾಲೆಗೆ ದಾಖಲಿಸಬೇಕು ಎಂದು ಸೂಚಿಸಿದರು.

ಜೆಜೆಎಂ, ಬಹುಗ್ರಾಮ ಕುಡಿಯುವ ನೀರು ಪೂರೈಕೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಮುಂಗಾರು ಹಂಗಾಮಿಗೆ ಬೇಕಾದ ಅಗತ್ಯ ಬೀಜ ಮತ್ತು ರಸಗೊಬ್ಬರ ದಾಸ್ತಾನು ಮಾಡಿಕೊಳ್ಳಬೇಕು. ರೋಗಿಗಳಿಗೆ ಸಮಯಕ್ಕೆ ಸರಿಯಾಗಿ ಸೂಕ್ತ ಔಷಧೋಪಚಾರ, ಚಿಕಿತ್ಸೆ ದೊರಕಿಸಬೇಕು. ಶಿಥಿಲ ಸೇತುವೆ, ರಸ್ತೆಗಳನ್ನು ದುರಸ್ತಿ ಮಾಡಬೇಕು ಎಂದು ಅವರು ಹೇಳಿದರು.

ಸರ್ಕಾರಿ ನೌಕರರು ಸರ್ಕಾರ ಹಾಗೂ ಸಾರ್ವಜನಿಕರ ನಡುವಿನ ಸಂಪರ್ಕ ಸೇತುವೆಯಾಗಿ ದಕ್ಷತೆಯಿಂದ ಕೆಲಸ ನಿರ್ವಹಿಸಬೇಕು. ಸರ್ಕಾರದ ಯಾವುದೇ ಯೋಜನೆಗಳು ಕೆಳ ಹಂತದಲ್ಲಿನ ಸಾರ್ವಜನಿಕರಿಗೆ ಅಥವಾ ಫಲಾನುಭವಿಗಳಿಗೆ ತಲುಪಬೇಕಾದರೆ ನೌಕರರು ಸಮನ್ವಯತೆಯಿಂದ ಕೆಲಸ ನಿರ್ವಹಿಸುವುದು ಅಗತ್ಯವಾಗಿದೆ ಎಂದು ಅವರು ಹೇಳಿದರು.

ಎಲ್ಲಾ ಇಲಾಖೆಗಳ ನೌಕರರು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸುವ ಮೂಲಕ ತಾಲೂಕಿನ ಅಭಿವೃದ್ಧಿಯಲ್ಲಿ ಕೈಜೋಡಿಸಬೇಕು. ತಮ್ಮ ಕರ್ತವ್ಯವನ್ನು ನಿಗದಿತ ಅವಧಿಯಲ್ಲಿ ದಕ್ಷತೆಯಿಂದ ಮಾಡುವ ಮೂಲಕ ಇತರರಿಗೆ ಮಾದ–ರಿಯಾಗಬೇಕು. ಸಾರ್ವಜನಿಕ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅವರು ಮನವಿ ಮಾಡಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರೂ ಆದ ತಾಪಂ ಆಡಳಿತಾಧಿಕಾರಿ ಬಿ.ಕಲ್ಲೇಶ, ತಹಸೀಲದಾರ ಎಸ್.ಬಿ.ಇಂಗಳೆ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ ಸಿದ್ನಾಳ ಮತ್ತಿತರರು ಉಪಸ್ಥಿತ–ರಿದ್ದರು. ಬಿಇಒ ಮೋಹನ ದಂಡಿನ್ ನಿರೂಪಿಸಿ ವಂದಿಸಿದರು.

## ಸಿ.ಸಿ.ರಸ್ತೆ ನಿರ್ಮಿಸಲು ಒತ್ತಾಯ



ಬೈಲಹೊಂಗಲ: ತಾಲೂಕಿನ ಬೈಲವಾಡ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಯರಡಾಲ ಗ್ರಾಮದ ಎಸ್.ಸಿ. ಕಾಲೋನಿಗಳಲ್ಲಿ ಸಿ.ಸಿ.ಗಟಾರ ಹಾಗೂ ರಸ್ತೆ ನಿರ್ಮಾಣ ಮಾಡಬೇಕೆಂದು ಅಲ್ಲಿನ ನಿವಾಸಿಗಳು ಸರಕಾರಕ್ಕೆ ಆಗ್ರಯಿಸಿದ್ದಾರೆ.

ಗ್ರಾಮದ ನೇಗಿನಹಾಳ ರಸ್ತೆಗೆ ಹೊಂದಿಕೊಂಡಿರುವ ಈ ಕಾಲೋನಿಯ ನಿವಾಸಿಗಳಿಗೆ ಮಳೆಗಾಲ ಪ್ರಾರಂಭವಾಯಿತೆಂದರೆ ಎಲ್ಲಿಲ್ಲದ ಆತಂಕ ಪ್ರಾರಂಭವಾಗುತ್ತದೆ. ಕಾರಣ ರಸ್ತೆಯ ಮೇಲಿನ ಹಾಗೂ ಬೇರೆ ಕಾಲುವೆಗಳ ನೀರು ಬಡಾವಣೆಗಳ ಮನೆಗಳಿಗೆ ನುಗ್ಗಿ ಹಲವಾರು ಸಮಸ್ಯೆಗಳನ್ನು ಸೃಷ್ಟಿಸುತ್ತಿದ್ದು ಅನೈರ್ಮಲ್ಯದಿಂದ ಜನರು ರೋಗಗಳಿಗೆ ಈಡಾಗುತ್ತಿದ್ದಾರೆ.

ಈ ಸಮಸ್ಯ ಕುರಿತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕಾ ಅಧಿಕಾರಿಗೆ ಮನವಿ ಸಲ್ಲಿಸಿದಾಗ ಅವರು ತಾಲೂಕಾ ಪಂಚಾಯತಿ ಕಾರ್ಯನಿರ್ವಾಹಕಾಧಿಕಾ–ರಿಗೆ ತಿಳಿಸಲಾಗಿದ್ದರೂ ಇಲ್ಲಿಯವರೆಗೆ ಯಾವದೇ ರೀತಿ ಕ್ರಮ ಕೈಗೊಂಡಿಲ್ಲವೆಂದು ಆರೋಪಿಸಲಾಗುತ್ತಿದೆ. ಈಗಾಗಿ ಅಲ್ಲಿನ ನಾಗ–ರಿಕರು ನರಕಯಾತನೆ ಅನುಭವಿಸುಂತಾಗಿದೆ.

ಗ್ರಾಮದ ಈ ಎಸ್.ಸಿ. ಕಾಲೋನಿಯಲ್ಲಿ ಹಲವಾರು ಸಮಸ್ಯಗಳು ತಾಂಡವಾಡುತ್ತಿದ್ದು ಸಿ.ಸಿ. ರಸ್ತೆ ಹಾಗೂ ವ್ಯವಸ್ಥಿತ ಒಳಚರಂಡಿ ಗಟಾರ ನಿರ್ಮಾಣ ಮಾಡಿ ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಯು.ಎನ್.ನಡುವಿನಮನಿ, ಐ.ಕೆ. ಹಂಚಿನಮನಿ, ಆರ್.ಎನ್.ನಡುವಿನಮನಿ, ಎಸ್.ಬಿ.ನಡುಬಿನಮನಿ, ರಾಜು ಕಂಠಿ, ಸದಾಶಿವ ನಡುವಿನಮನಿ ಮುಂತಾದವರು ಉಪಸ್ಥಿತರಿದ್ದರು.

## ಹಾಡಹಗಲೇ ಟ್ರ್ಯಾಕ್ಟರ್‌ನಲ್ಲಿ ಅಕ್ರಮ ಮರಳು ಸಾಗಣೆ



ಸಿರುಗುಪ್ಪ : ತಾಲೂಕಿನ ಹೆರಕಲ್ ಗ್ರಾಮದಲ್ಲಿ ಹಾಡಹಗಲೇ ಮರಳು ದಂಧೆ ನಡೆಯುತ್ತಿದ್ದು ಟ್ರ್ಯಾಕ್ಟರ್‌ನಲ್ಲಿ ತುಂಬಿಕೊಂಡು ಅಕ್ರಮ ಮರಳು ಸಾಗಿಸುತ್ತಿದ್ದರೂ ಅಕ್ರಮವನ್ನು ತಡೆಯುವಲ್ಲಿ ಅಧಿಕಾರಿಗಳ ವಿಫಲತೆ ಎದ್ದು ಕಾಣುತ್ತಿದೆ.

ತಾಲೂಕಿನ ಉಡ–ೕಗೋಳ ಗ್ರಾಮದಲ್ಲಿ ಮರಳು ಕೇಂದ್ರವಿದ್ದರೂ ನದಿಪಾತ್ರದ ಗ್ರಾಮಗಳಲ್ಲಿ ನದಿಯಲ್ಲಿ ನೀರಿದ್ದರೂ ತೆಪ್ಪಗಳ ಮೂಲಕ ನದಿಯ ನೀರಿನೊಳಗಿಂದ ಮರಳು ತಂದು ಮಾರಾಟ ಮಾಡಲಾಗುತ್ತಿದೆ.

ಅಕ್ರಮ ಮರಳು ತಡೆಗೆ ಸಂಬಂದಿಸಿದ ಕಂದಾಯ ಅಧಿಕಾರಿಗಳು, ಭೂಗಣಿ ವಿಜ್ಞಾನ ಮತ್ತು ಮಾಪನ ಇಲಾಖೆಗಳು ಜವಾಬ್ದಾರಿಯಿಂದ ನುಣುಚಿ ಕೊಳ್ಳುವುದರೊಂದಿಗೆ ಅನ್ಯ ಇಲಾಖೆಗಳ ಮೇಲೆ ಬೆರಳು ಮಾಡುತ್ತಾ ಜಾಣಕು ರುಡುತನ ಪ್ರದರ್ಶಿಸುತ್ತಿರುವುದು ಅಕ್ರಮದಲ್ಲಿ ಅಧಿಕಾರಿಗಳೂ ಶಾಮೀಲಾಗಿರುವ ಶಂಕೆ ಸಾರ್ವಜನಿಕರಲ್ಲಿ ವ್ಯಕ್ತವಾಗುತ್ತಿದೆ.

ಅಕ್ರಮದ ಬಗ್ಗೆ ಕ್ರಮ ಕೈಗೊಳ್ಳ ಬೇಕಾದ ಅಧಿಕಾರಿಗಳು ಮಾಹಿತಿ ನೀಡಿದವರನ್ನೇ ಬೆದ–ರಿಸಲಾಗುತ್ತಿದೆಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಭಯದ ವಾತಾವರಣವನ್ನುಂಟು ಮಾಡುತ್ತಿವೆ.

ಪ್ರತಿಗ್ರಾಮಕ್ಕೆ ಪೋಲೀಸ್ ಇಲಾಖೆಯಿಂದ ಬೀಟ್ ಪೋಲೀಸ್ ಸಿಬ್ಬಂದಿ, ತಾಲೂಕು ಮಟ್ಟದಟಾಸ್ ಫೋರ್ಸ್ ಸಮಿತಿ, ಇದ್ದೂ ಇಲ್ಲದಂಗಾಗಿದ್ದು, ಅಕ್ರಮಗಳನ್ನು ನಿಯಂತ್ರಿಸಲು ಮುಂದಾಗದಿರುವುದು ಹಾಗೂ ರಸ್ತೆ, ಚರಂಡಿ, ಕಟ್ಟಡ ನಿರ್ಮಾಣದಂತಹ ಅಭಿವೃದ್ದಿ ಕಾರ್ಯಗಳಿಗೂ ಗುತ್ತಿಗೆದಾರರು ಬಳಸಿಕೊಳ್ಳುವ ಅಕ್ರಮ ಮರಳುದಂಧೆಗೆ ಪುಷ್ಠಿಯಾಗಿದೆ.

ಇನ್ನೂ ಮುಂದಾದರೂ ಸಂಬಂದಿಸಿದ ಅಧಿಕಾರಿಗಳು ಗಮನವಹಿಸಿ ಸಂಬಂದಿಸಿದವರ ಮೇಲೆ ಸೂಕ್ತ ಕ್ರಮ ಜರುಗಿಸಿ ಮರಳು ದಂಧೆಗೆ ಬಳಸಲಾಗುವ ಸಾಮಗ್ರಿಗಳನ್ನು ಮುಟ್ಟುಗೋಲು ಹಾಕಿಕೊಂಡು ಕಡ್ಡಾಯವಾಗಿ ಅಕ್ರಮವನ್ನು ಮುಂದಾಗಬೇಕಿದೆ.

## ಆದಿಶಕ್ತಿ ಗ್ರಾಮದೇವಿ ಜಾತ್ರೆಯ ಹೊನ್ನಾಟ



ಬೈಲಹೊಂಗಲ: ಸಮೀಪದ ಹೊಸೂರ ಗ್ರಾಮದ ಆದಿಶಕ್ತಿ ಗ್ರಾಮದೇವಿ ಜಾತ್ರಾ ಮಹೋತ್ಸವ ಅಂಗವಾಗಿ ಮೂರನೇಯ ದಿನದ ಹೊನ್ನಾಟದಲ್ಲಿ ಅಪಾರ ಜನಸ್ತೋಮ ತಮ್ಮ ಭಕ್ತಿಭಾವ ಮೆರೆದು ದೇವಿಯ ಕೃಪೆಗೆ ಪಾತ್ರರಾದರು.

ಗ್ರಾಮದ 3 ನೇ ವಾರ್ಡಿನಲ್ಲಿ ಮಹಿಳೆಯರು ದೇವಿಯ ಉಡಿ ತುಂಬುವ ಮೂಲಕ ಭಕ್ತಿಬಾವ ಮರೆದರು. ಭಕ್ತರು ದೇವಿಯ ಮೂರ್ತಿಯನ್ನು ಹೊತ್ತುಕೊಂಡ ಓಣಿಯಲ್ಲಿ ಮೆರವಣಿಗೆ ನಡೆಸಿದರು. ಭಕ್ತರು ಪರಸ್ಪರ ಹಿರಿಯರು ಕಿರಿಯರು ಎನ್ನದೇ ಭಂಡಾರದಲ್ಲಿ ಮಿಂದೆದ್ದರು. ಯುವತಿಯರು, ಮಹಿಳೆಯರು ಉತ್ಸಾಹದಿಂದ ಹೊನ್ನಾಟದಲ್ಲಿ ಪಾಲ್ಗೊಂಡಿದ್ದರು. ಭಂಡಾರದಿಂದಾಗಿ ಗ್ರಾಮ ಸಂಪೂರ್ಣ ಹಳದಿಮಯವಾಗಿತ್ತು.

ಈ ಸಂದರ್ಬದಲ್ಲಿ ಜಾತ್ರಾ ಮಹೋತ್ಸವ ಅಂಗವಾಗಿ ದಾಸೋಹ ಸೇವೆ ಸಲ್ಲಿಸಿದ ಮಹನೀಯರನ್ನು ಸನ್ಮಾನಿಸಲಾಯಿತು.

ಹೊಸೂರ ಗುರುಮಡಿವಾಳೇಶ್ವರ ಮಠದ ಗಂಗಾಧರ ಸ್ವಾಮಿಜಿ, ದೊಡವಾಡ ಜಡಿಸಿದ್ದಲಿಂಗೇಶ್ವರ ಶಿವಾಚಾರ್ಯ ಸ್ವಾಮಿಜಿ, ರುದ್ರಾಕ್ಷಿಮಠದ ಬಸವಲಿಂಗ ಸ್ವಾಮಿಜಿ, ಶಾಖಾ ಮೂರುಸಾವಿರಮಠದ ಪ್ರಭುನೀಲಕಂಠ ಸ್ವಾಮಿಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮಂಜುನಾಥ ಬಡಿಗೇರ, ಆನಂದ ಕುದರಿ, ಫಕಿರ ಗುಮ್ಮಗೋಳ, ನವೀನ ಯರಝರ್ವಿ, ಸಚೀನ ಹುರಕಡ್ಲಿ, ಆನಂದ ಮುತವಾಡ, ಉಮೇಶ ಮಳಗಲಿ, ಮಹಾದೇವ ಹುರಳಿ ಸಾವಿರಾರು ಸದ್ಭಕ್ತರು ಇದ್ದರು.

## ರೈತ ಉತ್ಪಾದಕರ ಕಂಪನಿಗಳಿಗೆ ರಫ್ತು ಮಾರುಕಟ್ಟೆ ಕುರಿತು ಕಾರ್ಯಾಗಾರ




ಬೆಳಗಾವಿ: ಮತ್ತಿಕೊಪ್ಪದ ಐಸಿ–ಎಆರ್–ಕೆವಿಲ್ಇ ಕೃಷಿ ವಿಜ್ಞಾನ ಕೇಂದ್ರದಲ್ಲಿ ರೈತ ಉತ್ಪಾದಕರ ಕಂಪನಿಗಳ ಉತ್ಪನ್ನಗಳಿಗೆ ರಫ್ತು ಮಾರುಕಟ್ಟೆ ಕು–ರಿತು ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಾ ಗಾರದ ಉದ್ಘಾಟನೆ ಯನ್ನು ಅಂತರಾಷ್ಟ್ರೀಯ ಕೃಷಿ ಮತ್ತು ನೈಸರ್ಗಿಕ ಸಂಪನ್ಮೂಲಗಳ ಅರ್ಥಶಾಸ್ತ್ರಜ್ಞ ಡಾ. ಪರಶುರಾಮ ಪಾಟೀಲ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು ರೈತರ ಆದ–ಾಯ ಅಧಿಕಗೊಳ್ಳಬೇಕಾದರೆ ರೈತರ ಉತ್ಪನ್ನಗಳನ್ನು ಸಂಸ್ಕರಣೆಯೊಂದಿಗೆ ರಫ್ತು ಮಾಡಿದಾಗ ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಭಾರತ ಸರ್ಕಾರ ರೈತರ ಉತ್ಪನ್ನಗಳನ್ನು ರಫ್ತು ಮಾಡಲು ಪ್ರೋತ್ಸಾಹಿಸುತ್ತಿದೆ.

ರೈತರ ಸಂಘಟನೆ ಬಲಪಡಿಸಲು ದೇಶಾದ್ಯಂತ ರೈತ ಉತ್ಪಾದಕ ಕಂಪನಿಗಳನ್ನು ರಚನೆ ಮಾಡಲಾಗುತ್ತಿದ್ದು ಆ ಮೂಲಕ ರೈತರ ಆದಾಯ ವೃದ್ಧಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

ರೈತರ ಉತ್ಪನ್ನಗಳನ್ನು ರೈತ ಉತ್ಪಾದಕರ ಕಂಪನಿಗಳ ಮೂಲಕ ಸಂಸ್ಕರಣೆ ಮಾಡಿ ರಫ್ತು ಮಾರುಕಟ್ಟೆ ಸಂಪರ್ಕ ಕಲ್ಪಿಸಲು ವಿಫುಲವಾದ ಅವಕಾಶಗಳಿವೆ. ಆದ್ದರಿಂದ ರೈತ ಉತ್ಪಾದಕ ಕಂಪನಿಗಳು ರಫ್ತು ಮಾಡಲು ನಿಗದಿಪಡಿಸಿದ ಗುಣಧರ್ಮ ಹೊಂದಿದ ಉತ್ಪನ್ನಗಳನ್ನು ಮಾರು ಕಟ್ಟೆ ಮಾಡಿ ರೈತರ ಆದಾಯ ಹೆಚ್ಚಿಸಲು ಪ್ರಯತ್ನಿಸಬೇಕು ಎಂದು ಕರೆ ನೀಡಿದರು.

ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಶ್ರೀಮತಿ ಶ್ರೀದೇವಿ ಬ. ಅಂಗಡಿಯವರು ಮಾತನಾಡಿ ಈಗಾಗಲೇ ಕೃಷಿ ವಿಜ್ಞಾನ ಕೇಂದ್ರವು ರಚಿಸಿದ ಬೆಳಗಾವಿ ಸಮಗ್ರ ಕೃಷಿ ರೈತ ಉತ್ಪಾದಕರ ಸಹಕಾರಿ ಸಂಘ ನಿಯಮಿತ. ಬೆಳಗಾವಿಯವರು ಬೆಂಡೆ ತರಕಾರಿಯನ್ನು ರಫ್ತು ಮಾಡುತ್ತಿದ್ದಾರೆ.

ಅದರಂತೆ ಇನ್ನೂ ಅನೇಕ ರೈತ ಉತ್ಪಾದಕ ಕಂಪನಿಗಳಿಗೆ ರಫ್ತು ಮಾಡಲು ಸಹಕಾರ ನೀಡಲಾಗುವುದು ಎಂದರು.

ಎನೊಜಿಕ ಕಮರ್ಶಿಯಲ್ ಟ್ರೆಡ್ ಪ್ರೈ.ಲಿ. ಕಂಪನಿಯ ಶ್ರೀ ವಿಜಯ ದೇಸಾಯಿ ಹಾಗೂ ಶ್ರೀ ಶಿಖರ ಜೋಶಿ ಮಾತನಾಡಿ ರೈತರ ಉತ್ಪನ್ನಗಳನ್ನು ರಫ್ತು ಮಾಡಲು ನಿಯಮಗಳನ್ನು ವಿವರಿಸಿದರು.

## ಹಾರ, ತುರಾಯಿ ಬೇಡ; ನಿಮ್ಮ ಆಶೀರ್ವಾದ ಇರಲಿ: ಶಾಸಕ ರಾಜು ಕಾಗೆ ಮನವಿ



ಮೋಳೆ: ನಾನು ಜನ ಸೇವಕ. ನಿಮ್ಮ ಸೇವಕನಿಗೆ. ಶಾಸಕ ಸ್ಥಾನ ನೀವೇ ಕೊಟ್ಟ ವರಪ್ರಸಾದ. ಹೀಗಾಗಿ, ಹಾರ–ತುರಾಯಿ ಹಾಕಿ ಸನ್ಮಾನಿಸುವುದು ಬೇಡ. ನಿಮ್ಮ ಆಶೀರ್ವಾದ ನನ್ನ ಮೇಲೆ ಸದಾ ಹೀಗೆ ಇರಲಿ ಎಂದು ಕಾಗವಾಡ ಮತಕ್ಷೇತ್ರದ ಶಾಸಕ ಶಾಸಕ ರಾಜು ಕಾಗೆ ಜನತೆಯಲ್ಲಿ ಮನವಿ ಮಾಡಿದರು.

ಅವರು ಶಾಸಕರಾಗಿ ಚುನಾಯಿತರಾವದ ಮೇಲೆ ಬೆಂಗಳೂರಿನಿಂದ ಪ್ರಥಮ ಬಾರಿಗೆ ಸ್ವಾ–ಗ್ರಾಮಕ್ಕೆ ಆಗಮಿಸಿಸೂಕ್ಷೇತ್ರ ಹಣಮಾಪೂರ ಗ್ರಾಮದಲ್ಲಿ ಸದಗುರು ಶ್ರೀ ಸಿದ್ದರತ್ನ ಮದಗೊಂಡೇಶ್ವರ ಅಪ್ಪಾ–ಜಿಯವರ 13 ನೇ ಪುಣ್ಯಾರಾಧನೆಯ ನಿಮಿತ್ಯ ಭಾರತೀಯ ಸಂಸ್ಕೃತಿ ಮಹೋತ್ಸವದಲ್ಲಿ ಪಾಲ್ಗೊಂಡು ಪುಜ್ಯ–ರಿಂದ ಹಾಗೂ ಸಾರ್ವಜನಿಕರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನನ್ನನ್ನು ಹಲವಾರು ಬಾರಿ ಕೈ ಹಿಡಿದು ನನ್ನ ಬೆಂಬಲಕ್ಕೆ ನಿಂತಿದ್ದೀರಿ. ಸೋಲು ಗೆಲುವಿನಲ್ಲಿಯೂ ಸಾಥ್ ಕೊಟ್ಟಿದ್ದೀರಿ. ಈಗ 5 ನೇ ಬಾರಿಗೆ ನನ್ನನ್ನು ಪ್ರಚಂಡ ಮತಗಳಿಂದ ಜಯಗಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ನಿಮಗೆ ಋಣಿಯಾಗಿರುವೆನು ಎಂದರು.

ನೀವು ಕೊಟ್ಟ ಈ ಗೆಲುವು ನನಗೆ ಬಹುದೊಡ್ಡ ಸನ್ಮಾನ. ನಾನೇ ನಿಮಗೆ ಸನ್ಮಾನ ಮಾಡಬೇಕು. ಆದ್ದರಿಂದ ತಾವ್ಯಾರೂ ನನ್ನನ್ನು ಸನ್ಮಾನಿಸುವ, ಹಾರ ತುರಾಯಿಗಳಿಂದ ಅಭಿನಂದಿಸುವುದು ಬೇಡ. ನಿಮ್ಮ ಹೃದಯಪೂರ್ವಕ ಆಶೀರ್ವಾದ, ಹಾರೈಕೆಗಳು ಯಾವಾಗಲೂ ನನ್ನ ಮೇಲಿರಲಿ ಎಂದು ಮನತುಂಬಿ ಹೇಳಿದರು.

**ಒಂದೇ ಗುರಿ ;**

ಈ ಭಾಗದ ಜನರ ಬಹುದಿನಗಳ ಬೇಡಿಕೆಯಾಗಿರುವ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಈಗಾಗಲೇ ನಾನು ಕಾರ್ಯಪ್ರವೃತ್ತನಾಗಿದ್ದೇನೆ. ಶಾಸಕನಾಗಿ ಪ್ರಮಾಣ ವಚನ ಸ್ವೀಕರಿಸುವ ಮುನ್ನವೇ ಮುಖ್ಯಮಂತ್ರಿ, ಉಪಮುಖ್ಯ ಮಂತ್ರಿಗಳೊಂದಿಗೆ ಯೋಜನೆ ಬಗ್ಗೆ ಸುದೀರ್ಘವಾಗಿ ಮಾತನಾಡಿ, ತ್ವ–ರಿತ ಗತಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಮನವಿ ಮಾಡಿದ್ದೇನೆ.

ಇದಕ್ಕೆ ಮುಖ್ಯಮಂತ್ರಿಗಳು ಸಮ್ಮತಿ ಸೂಚಿಸಿದ್ದಾರೆ. ಆದಷ್ಟು ಬೇಗ, ಬಾಕಿ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸುವ ಮೂಲಕ ನಿಮಗೆ ಸಮರ್ಪಿಸುತ್ತೇನೆ ಎಂದು ರಾಜು ಕಾಗೆ ಭರವಸೆ ನೀಡಿದರು.

ನೀರಾವರಿ ಯೋಜನೆಗಳೂ ಸೇರಿದಂತೆ ಒಟ್ಟಾರೆ ಕಾಗವಾಡ ಮತಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬದ್ಧನಿದ್ದೇನೆ. ನಮ್ಮದೇ ಸರ್ಕಾರ ಇರುವುದರಿಂದ ಅಭಿವೃದ್ಧಿಗೆ ಸಹಕಾರ ಸಿಗಲಿದೆ.


ಎಲ್ಲರೂ ಪಕ್ಷಭೇದ ಮರೆತು ಕ್ಷೇತ್ರದ ಅಭಿವೃದ್ಧಿ ಮಾಡೋಣ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರ ಸಹಕಾರ ಅಗತ್ಯ. ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡಲು ನಿಮ್ಮ ಸಹಕಾರ ಬೇಕೆಂದು ಹೇಳಿದರು.

**ಅಡಿಗಲ್ಲಿಟ್ಟವರಿಂದಲೇ ಉದ್ಘಾಟನೆ;**

ಕಾಗವಾಡ ಮತಕ್ಷೇತ್ರದ ಉತ್ತರ ಭಾಗದ ಮದಭಾವಿ ಹಾಗೂ ಅನಂತಪೂರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಸುಮಾಡು 23 ಹಳ್ಳಿಗಳು ಸತತ ಬರಗಾಲದಿಂದ ತತ್ತರಿಸಿ ಹೋಗಿವೆ. ಈ ಭಾಗಕ್ಕೆ ನೀರಾವರಿ ಕಲ್ಪಿಸುವಗೋಸ್ಕರ 2017 ರಲ್ಲಿ ನಾನು ಶಾಸಕನಾಗಿದ್ದೇ. ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ, ನೀರಾವರಿ ಸಚಿವ ಎಂ.ಬಿ.ಪಾಟೀಲ–ರಿಗೆ ಮನವಿ ಮಾಡಿಕೊಂಡಾಗ ಜೂನ್ 30 2017 ರಲ್ಲಿ ಇಬ್ಬರು ಬಂದು ಬಸವೇಶ್ವರ ಏತ ನೀರಾವರಿ ಯೋಜನೆಗೆ ಹಣ ಬಿಡುಗಡೆಗೊಳಿಸಿ ಅಡಿಗಲ್ಲನಿಟ್ಟು ಹೋಗಿದ್ದರು. ಅವರು ಮಂಜೂರುಗೊಳಿಸಿರುವ ಹಣದಲ್ಲೇ ಇಲ್ಲಿಯವರೆಗೆ ಕಾಮಗಾರಿ ನಡೆದಿದ್ದೆ, ಇನ್ನು ಕಾಮಗಾರಿ ಬಾಕಿ ಇದೆ. ಶೀಘ್ರವೇ ಎಲ್ಲಾ ಕಾಮಗಾರಿಯನ್ನು ಮುಗಿಸಿ ಆರು ತಿಂಗಳೊಳಗಾಗಿ ಅಡಿಗಲ್ಲನಿಟ್ಟಿದ್ದ ಸಿದ್ದರಾಮಯ್ಯನವರಿಂದಲೇ ಉದ್ಘಾಟನೆ ಗೊಳಿಸುವುದಾಗಿ ರಾಜು ಕಾಗೆ ರೈತರಿಗೆ ಭರವಸೆ ನೀಡಿದರು.

ಈ ವೇಳೆ ಪಪೂಶ್ರೀ ಶಿದ್ದಯೋಗಿ ಅಮರೇಶ್ವರ ಮಹಾರಾಜರು, ಸೇರಿದಂತೆ ಹಲವಾರು ಪುಜ್ಯರು, ಮುಖಂಡರಾದ ರಾವಸಾಹೇಬ ಬೆವನೂರ, ಶಂಕರ ವಾಘಮೊಡೆ, ಬಾಬುರಾವ್ ವಾಘಮೋಡೆ ವಸಂತ ಖೋತ, ರಾಜು ಮದನೆ, ಸಂ–ಜಯ ಮುಕುಂದ,ಬಾಬು ಮೆಂಡಿಗೇರಿ, ವಿನಾಯಕ ಬಾಗಡಿ, ಬಸನಗೌಡ ಪಾಟೀಲ(ಬಮ್ನಾಳ) ಮುರಗೆಪ್ಪ ಮಜ್ಜಗಿ, , ಬಸವರಾಜ ಖೋತ, ಸುರೇಶ ವಾಘಮೋಡೆ, ಸೇರಿದಂತೆ ಅನೇಕರು ಇದ್ದರು.

## 9ರ ಬಾಲಕ ಹೃದಯಾಘಾತದಿಂದ ಸಾವು



ಬೆಂಗಳೂರು: ಜಾತ್ರೆಗೆ ಬಂದಿದ್ದ ಬಾಲಕ ಆಟವಾಡುತ್ತ ಕುಸಿದು ಬಿದ್ದು ಸಾವನ್ನಪ್ಪಿರುವ ಘೋರ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆದಿದೆ.

ದೊಡ್ಡಬಳ್ಳಾಪುರದ ಮುತ್ಯಾಲಮ್ಮ ಜಾತ್ರೆಗೆ ಬಂದಿದ್ದ 9 ವರ್ಷದ ಬಾಲಕ ಶ್ರೇಯಸ್ ಮಕ್ಕಳೊಂದಿಗೆ ಆಟವಾಡುತ್ತಿದ್ದ. ಈ ವೇಳೆ ಏಕಾಏಕಿ ಕುಸಿದು ಬಿದ್ದಿದ್ದಾನೆ. ಬಾಲಕ ಹೃದಯಾಘಾತದಿಂದ ಮೃತಪಟ್ಟಿದ್ದಾಗಿ ತಿಳಿದುಬಂದಿದೆ.

ದೊಡ್ಡಬಳ್ಳಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ನ್ಯಾಯಾಲಯದ ರಜತ ಮಹೋತ್ಸವ ಸಮಾರಂಭ

ಬೆಳಗಾವಿ ಜಿಲ್ಲಾ ನ್ಯಾಯಾಂಗ ಹಾಗೂ ವಕೀಲರ ಸಂಘ ಸಂಕೇಶ್ವರ ಇವರ ಸಂಯುಕ್ತ ಆಶ್ರಯದಲ್ಲಿ ಸಂಕೇಶ್ವರ ದಿವಾಣಿ ಹಾಗೂ ಪ್ರಥ–ಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದ ರಜತ ಮಹೋತ್ಸವ ಸಮಾರಂಭವು ಮಧ್ಯಾಹ್ನ 3.30 ಗಂಟೆಗೆ ಎ.ಪಿ.ಎಂ.ಸಿ ಸಂಕೇಶ್ವರ ಇಲ್ಲಿ ಜರುಗಲಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಪ್ರಸನ್ನ ಬಿ. ವರಾಳೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮುಸ್ತಫಾ ಹುಸೇನ್ ಎಸ್. ಎ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089